ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 203

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಬುಧವಾರ: 22-07-2026

## ಅನಗತ್ಯ ಹಣ ವಸೂಲಿ ಮಾಡಿದರೆ ಖಾಸಗಿ ಆಸ್ಪತ್ರೆಗಳ ವಿರುದ್ಧ ಕ್ರಮ: ಖಾದರ್ ಎಚ್ಚರಿಕೆ

**ಬೆಂಗಳೂರು, ಜು.21:** ಚಿಕಿತ್ಸೆ ಹೆಸರಿನಲ್ಲಿ ರೋಗಿಗಳಿಂದ ಅನಗತ್ಯವಾಗಿ ಹೆಚ್ಚಿನ ಹಣ ವಸೂಲಿ ಮಾಡಿದರೆ ಖಾಸಗಿ ಆಸ್ಪತ್ರೆಗಳ ವಿರುದ್ಧ ಕಠಿಣ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಆರೋಗ್ಯ ಸಚಿವ ಯು.ಟಿ. ಖಾದರ್ ಎಚ್ಚರಿಕೆ ನೀಡಿದ್ದಾರೆ.

ಮಳೆಗಾಲದ ಹಿನ್ನೆಲೆಯಲ್ಲಿ ಸಾಂಕ್ರಾಮಿಕ ರೋಗಗಳ ನಿಯಂತ್ರಣ ಕುರಿತು ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಖಾಸಗಿ ಆಸ್ಪತ್ರೆಗಳ ಕಾರ್ಯವೈಖರಿ ಮೇಲೆ ಆರೋಗ್ಯ ಇಲಾಖೆ ಕಟ್ಟುನಿಟ್ಟಿನ ನಿಗಾ ವಹಿಸಲಿದೆ ಎಂದು ತಿಳಿಸಿದರು.

ಖಾಸಗಿ ಆಸ್ಪತ್ರೆಗೆ ದಾಖಲಾಗುವ ಪ್ರತಿಯೊಬ್ಬ ರೋಗಿಯ ಸಂಪೂರ್ಣ ವಿವರವನ್ನು ಆರೋಗ್ಯ ಇಲಾಖೆಗೆ ಸಲ್ಲಿಸಬೇಕು. ಯಾವ ರೋಗಕ್ಕೆ ಚಿಕಿತ್ಸೆ ನೀಡಲಾಗುತ್ತಿದೆ, ಅದರ ಚಿಕಿತ್ಸಾ ವೆಚ್ಚ ಎಷ್ಟು ಎಂಬ ಮಾಹಿತಿಯನ್ನೂ ಕಡ್ಡಾಯವಾಗಿ ನೀಡುವಂತೆ ಆಸ್ಪತ್ರೆಗಳ ಆಡಳಿತ ಮಂಡಳಿಗೆ ಸೂಚನೆ ನೀಡಲಾಗಿದೆ.

ಮಳೆಗಾಲದಲ್ಲಿ ಡೆಂಗ್ಯೂ, ಚಿಕನ್‌ಗುನ್ಯಾ ಹಾಗೂ ಮಲೇರಿಯಾ ಪ್ರಕರಣಗಳು ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಆಸ್ಪತ್ರೆಗಳು ಚಿಕಿತ್ಸೆಯಲ್ಲಿ ವೈದ್ಯಕೀಯ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಸಚಿವರು ಹೇಳಿದರು. ವಿಶೇಷವಾಗಿ



ಅಗತ್ಯವಿದ್ದಾಗ ಮಾತ್ರ ರೋಗಿಗಳಿಗೆ ಪ್ಲೇಟ್‌ಲೆಟ್‌ಗಳನ್ನು ನೀಡಬೇಕು. ಹಣ ಗಳಿಸುವ ಉದ್ದೇಶದಿಂದ ಅನಗತ್ಯವಾಗಿ ಪ್ಲೇಟ್‌ಲೆಟ್‌ಗಳನ್ನು ನೀಡಿರುವುದು ಕಂಡುಬಂದರೆ ಸಂಬಂಧಿಸಿದ ಆಸ್ಪತ್ರೆಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು ಎಂದು ಖಡಕ್ ಎಚ್ಚರಿಕೆ ನೀಡಿದರು. ಇದೇ ವೇಳೆ ಸಾಂಕ್ರಾಮಿಕ ರೋಗಗಳ ಹರಡುವಿಕೆಯನ್ನು ತಡೆಗಟ್ಟಲು ಸಾರ್ವಜನಿಕ ಹಾಗೂ ಖಾಸಗಿ ಪ್ರದೇಶಗಳಲ್ಲಿ ಮಳೆನೀರು ನಿಲ್ಲದಂತೆ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ನಿಂತ ನೀರಿನಲ್ಲಿ ಸೊಳ್ಳೆಗಳ ಲಾರ್ವಾ ಬೆಳೆಯುವ ಸಾಧ್ಯತೆ ಹೆಚ್ಚಿರುವುದರಿಂದ ಡೆಂಗ್ಯೂ ಮತ್ತು ಮಲೇರಿಯಾ ಹರಡುವ ಅಪಾಯ ಹೆಚ್ಚಾಗುತ್ತದೆ ಎಂದು ಹೇಳಿದರು.

ಸಾರ್ವಜನಿಕ ಸ್ಥಳಗಳ ಸ್ವಚ್ಛತೆಗೆ ಆದ್ಯತೆ ನೀಡುವಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚನೆ ನೀಡಿರುವ ಸಚಿವರು, ಖಾಸಗಿ ಜಾಗಗಳಲ್ಲಿ ಕೊಳಚೆ ನೀರು ಅಥವಾ ಮಳೆನೀರು ನಿಂತಿದ್ದರೆ ಜಾಗದ ಮಾಲೀಕರು ತಕ್ಷಣ ಸ್ವಚ್ಛಗೊಳಿಸಬೇಕು. ನಿಯಮ ಪಾಲಿಸದ ಮಾಲೀಕರ ವಿರುದ್ಧ ದಂಡ ಸೇರಿದಂತೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಮಳೆಗಾಲದಲ್ಲಿ ರೋಗ ಹರಡುವಿಕೆಯನ್ನು ತಡೆಗಟ್ಟಲು ಸರ್ಕಾರ, ಸ್ಥಳೀಯ ಸಂಸ್ಥೆಗಳು, ಆಸ್ಪತ್ರೆಗಳು ಮತ್ತು ಸಾರ್ವಜನಿಕರು ಸಮನ್ವಯದಿಂದ ಕಾರ್ಯನಿರ್ವಹಿಸುವ ಅಗತ್ಯವಿದೆ ಎಂದು ಸಚಿವರು ಹೇಳಿದರು.

## ಸಂಪುಟ ವಿಸ್ತರಣೆ ದೆಹಲಿಯಲ್ಲಿ ಸಭೆ



**ಬೆಂಗಳೂರು, ಜು. 21–** ರಾಜ್ಯ ಸಚಿವ ಸಂಪುಟ ವಿಸ್ತರಣೆ ಸನ್ನಿಹಿತವಾಗಿದ್ದು, 3–4 ದಿನಗಳಲ್ಲಿ ಸಂಪುಟ ವಿಸ್ತರಣೆಯಾಗುವುದು ಬಹುತೇಕ ನಿಶ್ಚಿತ.

ಸಚಿವ ಸಂಪುಟ ವಿಸ್ತರಣೆಗೆ ಮುಹೂರ್ತ ನಿಗದಿ ಮಾಡಲು ಹಾಗೂ ಸಚಿವರ ಪಟ್ಟಿಯನ್ನು ಅಂತಿಮಗೊಳಿಸಲು ಕಾಂಗ್ರೆಸ್ ಹೈಕಮಾಂಡ್‌ನ ಬುಲಾವ್ ಮೇರೆಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಇವರುಗಳು ಇಂದು ಬೆಳಗ್ಗೆ ವಿಶೇಷ ವಿಮಾನದಲ್ಲಿ ದೆಹಲಿಗೆ ತೆರಳಿದ್ದಾರೆ.

ಇಂದು ಸಂಜೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೇತೃತ್ವದಲ್ಲಿ ಕಾಂಗ್ರೆಸ್‌ನ ಉನ್ನತ ಮಟ್ಟದ ಸಭೆ ನಡೆಯಲಿದ್ದು, ಈ ಸಭೆಯಲ್ಲಿ ನೂತನ ಸಚಿವರ ಪಟ್ಟಿಯನ್ನು ಅಂತಿಮಗೊಳಿಸಲಾಗುತ್ತದೆ. 2ನೇಪುಟಕ್ಕೆ►

## ರಾಯಚೂರು ಜಿಲ್ಲೆಯನ್ನು ಬರಪೀಡಿತ ಜಿಲ್ಲೆಯೆಂದು ಘೋಷಿಸಲು ಆಗ್ರಹಿಸಿ ಕಂದಾಯ ಸಚಿವರಿಗೆ ಮನವಿ



ಧೈರ್ಯದ ದಾರಿ

**ರಾಯಚೂರು:** ಈ ವರ್ಷ ಸಕಾಲಕ್ಕೆ ಮಳೆಯಾಗದ ಕಾರಣ ಇಡೀ ರಾಯಚೂರು ಜಿಲ್ಲೆಯಲ್ಲಿ ತೀವ್ರ ಬರಗಾಲ ಆವರಿಸಿದ್ದು, ರೈತರು ಬೆಳೆದ ಬೆಳೆಗಳು ಸಂಪೂರ್ಣವಾಗಿ ಒಣಗಿ ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ರಾಯಚೂರು ಜಿಲ್ಲೆಯನ್ನು ಕೂಡಲೇ ಬರಪೀಡಿತ ಜಿಲ್ಲೆಯೆಂದು ಘೋಷಿಸಬೇಕೆಂದು ಕೋರಿ ಕನ್ನಡ ಸೇನೆ ಕರ್ನಾಟಕ ಜಿಲ್ಲಾ ಸಮಿತಿಯಿಂದ ಮಾನ್ಯ ಜಿಲ್ಲಾಧಿಕಾರಿಗಳ ಮುಖಾಂತರ ಮಾನ್ಯ ಕಂದಾಯ ಸಚಿವರಿಗೆ ಮನವಿ ಸಲ್ಲಿಸಲಾಯಿತು.

ಜಿಲ್ಲೆಯ ರಾಯಚೂರು, ದೇವದುರ್ಗ, ಅರಕೇರಾ, ಸಿರವಾರ, ಮಾನವಿ, ಲಿಂಗಸೂಗೂರು, ಮಸ್ಕಿ ಮತ್ತು ಸಿಂಧನೂರು ತಾಲ್ಲೂಕುಗಳಲ್ಲಿ ಮುಂಗಾರು ಮಳೆಯ ಕೊರತೆಯಿಂದ ಹತ್ತಿ, ಸೂರ್ಯಕಾಂತಿ ಮತ್ತು ಭತ್ತ ಸೇರಿದಂತೆ ಬಿತ್ತನೆ ಮಾಡಿದ್ದ ಪ್ರಮುಖ ಬೆಳೆಗಳು ಸಂಪೂರ್ಣವಾಗಿ ಒಣಗಿಹೋಗಿವೆ. ಇದರಿಂದ ಅನ್ನದಾತರು ಕಂಗಾಲಾಗಿದ್ದಾರೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

**ಮುಖಂಡರ ಪ್ರಮುಖ ಬೇಡಿಕೆಗಳು:**

**ಬರ ಘೋಷಣೆ:** ರಾಯಚೂರು ಜಿಲ್ಲೆಯನ್ನು ಅಧಿಕೃತವಾಗಿ ತಕ್ಷಣವೇ ಬರಪೀಡಿತ ಪ್ರದೇಶವೆಂದು ಘೋಷಿಸಬೇಕು.

**ಬೆಳೆ ಹಾನಿ ಪರಿಹಾರ:** ಸಂಕಷ್ಟದಲ್ಲಿರುವ ರೈತರಿಗೆ ಎಕರೆಗೆ ಕನಿಷ್ಠ ರೂ. 50,000 ಸೂಕ್ತ ಆರ್ಥಿಕ ಪರಿಹಾರ ಮತ್ತು ವಿಶೇಷ ಪ್ಯಾಕೇಜ್ ಘೋಷಿಸಬೇಕು.

ಸಾಲ ಮನ್ನಾ: ರೈತರ ಎಲ್ಲಾ ಕೃಷಿ ಸಾಲಗಳನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕು ಹಾಗೂ ರೈತರ ಮಕ್ಕಳ ವಿದ್ಯಾಭ್ಯಾಸಕ್ಕೆ ವಿಶೇಷ ಆರ್ಥಿಕ ನೆರವು ನೀಡಬೇಕು.

**ಜಾನುವಾರು ರಕ್ಷಣೆ:** ಜಾನುವಾರುಗಳಿಗೆ ಮೇವು ಮತ್ತು ಕುಡಿಯುವ ನೀರಿನ ಕೊರತೆ ಉಂಟಾಗದಂತೆ ತಕ್ಷಣವೇ ಗೋಶಾಲೆಗಳನ್ನು ತೆರೆದು, ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು.

ಈ ಸಂದರ್ಭದಲ್ಲಿ ಕನ್ನಡ ಸೇನೆ ಕರ್ನಾಟಕದ ಜಿಲ್ಲಾಧ್ಯಕ್ಷರಾದ ಬಸವರಾಜ್ ಎಂ., ಜಿಲ್ಲಾ ಉಪಾಧ್ಯಕ್ಷರಾದ ನಾಗಪ್ಪ, ಸಿರವಾರ ತಾಲ್ಲೂಕು ಅಧ್ಯಕ್ಷರಾದ ಮೌನೇಶ್ ಪಿತಗಲ್, ರಾಯಚೂರು ತಾಲ್ಲೂಕು ಅಧ್ಯಕ್ಷರಾದ ರಾಮಪ್ಪ ನಾಯಕ್, ಸಂಘಟನಾ ಕಾರ್ಯದರ್ಶಿ ಹಾಗೂ ಅರಕೇರಾ ತಾಲ್ಲೂಕು ಅಧ್ಯಕ್ಷರಾದ ಮೌನೇಶ್ ಬುಡ್ಡಿ, ವರದಿಗಾರರಾದ ನಾಗಲಿಂಗಪ್ಪ ಸೇರಿದಂತೆ ಹಲವು ಪ್ರಮುಖ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಚಿಮ್ಲಾಪೂರು ಗ್ರಾಮದಲ್ಲಿ ಲೊಯೋಲ ಕಾಲೇಜ್ ವಿದ್ಯಾರ್ಥಿಗಳಿಂದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಜಾಗೃತಿ ಜಾಥ

ಧೈರ್ಯದ ದಾರಿ

**ಮಾನ್ವಿ:** ತಾಲೂಕಿನ ಚಿಮ್ಲಾಪೂರು ಗ್ರಾಮದಲ್ಲಿ ಮಾನ್ವಿಯ ಲೊಯೋಲ ಕಾಲೇಜ್ ರಾಷ್ಟ್ರೀಯ ಸೇವಾ ಯೋಜನೆ ಹಾಗೂ ಮತದಾರರ ಸಾಕ್ಷರತಾ ಸಂಘದ ವತಿಯಿಂದ ನಡೆದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಸಾರ್ವಜನಿಕರಿಗೆ ಜಾಗೃತಿ ಜಾಥಾ ಅಭಿಯಾನ-2026 ಕ್ಕೆ ಸರಕಾರಿ ಪ್ರಾಥಮಿಕ ಶಾಲೆಯ ಮುಖ್ಯಗುರುಗಳಾದ ಸಿದ್ರಾಮಪ್ಪ ಚಾಲನೆ ನೀಡಿ ಮಾತನಾಡಿ ಪ್ರಜಾಪ್ರಭುತ್ವ ದೇಶದಲ್ಲಿ ಪ್ರತಿಯೊಂದು ಮತವು ಕೂಡ ಅತ್ಯಂತ ಅಮೂಲ್ಯವಾಗಿದು ಗ್ರಾಮದಲ್ಲಿನ ಪ್ರತಿಯೊಬ್ಬ ಅರ್ಹ ಮತದಾರರು ಕೂಡ ಮತದಾರರ ಪಟ್ಟಿಯ ವಿಶೇಷ




ಸಮಗ್ರ ಪರಿಷ್ಕರಣೆಯಲ್ಲಿ ಭಾಗವಹಿಸಿ. ತಮ್ಮ ಮತದಾರರ ಪಟ್ಟಿಯಲ್ಲಿನ ಗುರುತಿನ ಚೀಟಿಯಲ್ಲಿರುವ ಹೆಸರು, ಜನ್ಮ ದಿನಾಂಕ ಹಾಗೂ ವಿಳಾಸಗಳು ಆಧಾರ್ 2ನೇಪುಟಕ್ಕೆ

### ಫಲಾನುಭವಿಗಳಿಗೆ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳ ಲಾಭ ತಲುಪಿಸಲು ಪ್ರಮಾಣಿಕ ಪ್ರಯತ್ನ

## ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಸಾರ್ವಜನಿಕರ ಸಹಕಾರ ಅಗತ್ಯ: ಡಿಹೆಚ್‌ಒ ಡಾ.ನಂದಿತಾ

ಧೈರ್ಯದ ದಾರಿ



**ರಾಯಚೂರು ಜುಲೈ 21;** ಜಿಲ್ಲೆಯ ಸಾರ್ವಜನಿಕರಿಗೆ ಉತ್ತಮ ಮತ್ತು ಗುಣಮಟ್ಟದ ಆರೋಗ್ಯ ಸೇವೆಗಳನ್ನು ಒದಗಿಸುವ ಉದ್ದೇಶದಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ವಿವಿಧ ಆರೋಗ್ಯ ಸೇವೆಗಳು ಹಾಗೂ ಯೋಜನೆಗಳನ್ನು ಸರ್ಕಾರಿ ಆಸ್ಪತ್ರೆಗಳು ಮತ್ತು ಆರೋಗ್ಯ ಕೇಂದ್ರಗಳ ಮೂಲಕ ಉಚಿತವಾಗಿ ಒದಗಿಸಲಾಗುತ್ತಿದೆ. ಈ ಸೌಲಭ್ಯಗಳ ಸದುಪಯೋಗವನ್ನು ಪಡೆದು ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಸಾರ್ವಜನಿಕರು ಸಹಕರಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ.ನಂದಿತಾ ಎಮ್.ಎನ್ ಅವರು ಮನವಿ ಮಾಡಿದ್ದಾರೆ.

ಜಿಲ್ಲೆಯಲ್ಲಿ ರಾಯಚೂರು, ಸಿಂಧನೂರು, ಮಾನ್ವಿ, ಲಿಂಗಸುಗೂರ, ದೇವದುರ್ಗ ತಾಲೂಕುಗಳಲ್ಲಿ ತಾಯಿ ಮಗುವಿನ ಆರೈಕೆಯೊಂದಿಗೆ ವಿವಿಧ ರಾಷ್ಟ್ರೀಯ ಕಾರ್ಯಕ್ರಮಗಳನ್ನು ಜನತೆಗೆ ಮುಟ್ಟಿಸಲಾಗುತ್ತಿದೆ. ಇಲಾಖೆಯ ಸೇವೆಗಳು ಜನತೆಗೆ ಸಕಾಲದಲ್ಲಿ ತಲುಪುವ ದಿಶೆಯಲ್ಲಿ ಜಿಲ್ಲೆಯ ಜನಪ್ರತಿನಿಧಿಗಳು, ಜಿಲ್ಲಾಧಿಕಾರಿಗಳು, ಜಿ.ಪಂ ಸಿಇಒ ಅವರ ಮಾರ್ಗದರ್ಶನದಲ್ಲಿ ತಾಯಿ ಮಗುವಿನ ಆರೈಕೆಯ ಸೇವೆಗಳು ಸೇರಿದಂತೆ ಸೌಲಭ್ಯಗಳನ್ನು ಅರ್ಹ ಫಲಾನುಭವಿಗಳಿಗೆ 2ನೇ ಪುಟಕ್ಕೆ

## ಹಡಪದ ಅಪ್ಪಣ್ಣ ಜಯಂತಿ ಪೂರ್ವಭಾವಿ ಸಭೆ ಅರ್ಥಪೂರ್ಣವಾಗಿ ಆಚರಿಸಿ: ಅಪರ ಜಿಲ್ಲಾಧಿಕಾರಿ ಶಿವಾನಂದ

ಧೈರ್ಯದ ದಾರಿ

**ರಾಯಚೂರು ಜುಲೈ 21;**ರಾಯಚೂರು ಜಿಲ್ಲೆಯಲ್ಲಿ ಆಗಸ್ಟ್ 04ರಂದು ಜಿಲ್ಲಾ ಮಟ್ಟದಲ್ಲಿ ಹಡಪದ ಅಪ್ಪಣ್ಣ ಜಯಂತಿ ಕಾರ್ಯಕ್ರಮವನ್ನು ಎಲ್ಲರ ಸಹಕಾರ, ಸಮನ್ವಯತೆ ಹಾಗೂ ಸಾಮರಸ್ಯದೊಂದಿಗೆ ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಕ್ರಮವಹಿಸುವಂತೆ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜುಲೈ 21ರ ಮಂಗಳವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಹಡಪದ ಅಪ್ಪಣ್ಣ ಜಯಂತಿ ಆಚರಣೆ ಸಂಬಂಧ ಕರೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅಂದು ಬೆಳಿಗ್ಗೆ 9.30ಕ್ಕೆ ರಾಯಚೂರು ನಗರದ ಬಸವೇಶ್ವರ ವೃತ್ತದಿಂದ ಮೆರವಣಿಗೆ ನಡೆಸಲಾಗುವುದು. ನಂತರ 11ಗಂಟೆಗೆ ವೇದಿಕೆ ಕಾರ್ಯಕ್ರಮವನ್ನು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಬೇಕು. ವೇದಿಕೆಯಲ್ಲಿ ಹಡಪದ ಅಪ್ಪಣ್ಣ ಭಾವಚಿತ್ರದ ಬ್ಯಾನರ್‌ಗಳನ್ನು ಅಳವಡಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚಿಸಿದರು. ಜಯಂತಿ ಕಾರ್ಯಕ್ರಮದ ವೇದಿಕೆ ಅಲಂಕಾರ, ಗಣ್ಯರಿಗೆ ಪುಸ್ತಕ ವಿತರಣೆ, ಪೂಜೆಗೆ ಹೂವು-ಹಾರಗಳ ವ್ಯವಸ್ಥೆ ಮಾಡಬೇಕು. ಪೊಲೀಸ್ ಇಲಾಖೆಯಿಂದ ಮೆರವಣಿಗೆ ಹಾಗೂ ವೇದಿಕೆ ಕಾರ್ಯಕ್ರಮ ನಡೆಯುವ ಸ್ಥಳದಲ್ಲಿ ಸೂಕ್ತ ಬಂದೋಬಸ್ತ್ ಒದಗಿಸಬೇಕು. ಶಿಷ್ಠಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಿಸಿ ಗಣ್ಯರ ಆಹ್ವಾನಕ್ಕೆ ಕ್ರಮ ವಹಿಸಬೇಕು. ಎಲ್ಲ ಶಾಲಾ ಹಾಗೂ ಕಾಲೇಜುಗಳಲ್ಲಿ ಕಡ್ಡಾಯವಾಗಿ ಹಡಪದ ಅಪ್ಪಣ್ಣ ಜಯಂತಿ ಆಚರಣೆ ಮಾಡಬೇಕೆಂದು ಹೇಳಿದರು.

ವೇದಿಕೆ ಕಾರ್ಯಕ್ರಮದಲ್ಲಿ ಹಡಪದ ಅಪ್ಪಣ್ಣ ಅವರ ಕುರಿತು ವಿಶೇಷ ಉಪನ್ಯಾಸ ನೀಡಲು ಅವರ ಕುರಿತು ಹೆಚ್ಚಿನ ಮಾಹಿತಿ ಇರುವ ಉಪನ್ಯಾಸಕರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಲು ಸಭೆಯಲ್ಲಿ ನಿರ್ಣಯಿಸಲಾಯಿತು.

ಜಯಂತಿ ಆಚರಣೆ ಕಾರ್ಯಕ್ರಮಕ್ಕೆ ಸಮಾಜದ ಬಂಧುಗಳ ಸಹಕಾರವೂ ಅಗತ್ಯವಿದ್ದು, ಜಿಲ್ಲಾಡಳಿತದೊಂದಿಗೆ ಸಹಕರಿಸಿ ವ್ಯವಸ್ಥಿತ ಜಯಂತಿ ಆಚರಣೆಗೆ ಎಲ್ಲರೂ ಅನುಕೂಲ ಮಾಡಿಕೊಡಬೇಕು. ತಾಲೂಕು ಮಟ್ಟದಲ್ಲಿ ಜುಲೈ 29ರಂದು ಈ ಕಾರ್ಯಕ್ರಮದ ಆಚರಣೆ ಮಾಡಲಾಗುವುದು. ಸಮಾಜದ ಮುಖಂಡರ ಸಲಹೆಯಂತೆ ಜಿಲ್ಲಾ ಮಟ್ಟದ ಕಾರ್ಯಕ್ರಮವನ್ನು ಆಗಸ್ಟ್ 04ರಂದು ಆಚರಿಸಲಾಗುವುದು ಎಂದು ಹೇಳಿದರು.



ಇದೇ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರಾದೇವಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕ ಜಿ.ಸುರೇಶ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಡಿಟಿಡಿ ಚಂದ್ರಶೇಖರ, ಹಿರಿಯ ನಾಗರೀಕರ ಸಬಲೀಕರಣ ಇಲಾಖೆ ಅಧಿಕಾರಿ ಸರಸ್ವತಿ, ಜಿಲ್ಲಾ ಮಕ್ಕಳ ಸಂರಕ್ಷಣಾಧಿಕಾರಿ ಎಮ್.ಡಿ.ಗೋಕಲ್, ಕೃಷಿ ಇಲಾಖೆಯ ಸಹಾಯಕ ನಿರ್ದೇಶಕಿ ಪುಷ್ಪಲತಾ, ಕಲ್ಯಾಣ ಕರ್ನಾಟಕ ಮಹಿಳಾ ಸಂಘದ ಮುಖಂಡರಾದ ಡಾ.ಶಾಂತ ಕುಲಕರ್ಣಿ, ಹಡಪದ ಅಪ್ಪಣ್ಣ ಸಮಾಜದ ಮುಖಂಡರಾದ ಬಸವರಾಜ ಹೀರಾ, ಬಸವಂತರಾಯ್, ಅಮರಪ್ಪ, ಕರಿಬಸವ, ಗದ್ಯಪ್ಪ, ಮುತ್ತಣ್ಣ, ಆದಪ್ಪ, ನರಸಪ್ಪ, ಮಹಾದೇವ, ವೀರಭದ್ರಪ್ಪ, ಅಯ್ಯಪ್ಪ ಸಿರವಾರ, ವೀರೇಶ್, ಮಲ್ಲಿಕಾರ್ಜುನ ಮಹಾಂತೇಶ, ಗುಂಡಪ್ಪ ಸೇರಿದಂತೆ ಇತರರು ಇದ್ದರು.

ಮೊದಲನೇ ಪುಟದಿಂದ

## ಚಿಮ್ಲಾಪೂರು ಗ್ರಾಮದಲ್ಲಿ ಲೊಯೋಲ ಕಾಲೇಜ್ ವಿದ್ಯಾರ್ಥಿಗಳಿಂದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಜಾಗೃತಿ ಜಾಥ

ಕಾರ್ಡ್ನರ್ಂತೆಯೇ ಸರಿಯಾಗಿರುವುದನ್ನು ಖಚಿತಪಡಿಸಿಕೊಂಡು ಎನಮ್ಯೂರೆಶನ್ ಫಾರಂನಲ್ಲಿ ತುಂಬಿ ಬಿಎಲ್.ಓ,ಗಳಿಗೆ ಮರು ನೀಡಿದಾಗ ಮಾತ್ರ ನಿಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ನಮೂದಾಗಿರುತ್ತದೆ 18 ವರ್ಷ ತುಂಬಿದ ಅರ್ಹ ಯುವಕ,ಯುವತಿಯರು ಕೂಡ ಹೊಸದಾಗಿ ನಮೂನೆ 6 ಅನ್ನು ನೀಡಿ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಸೇರ್ಪಡೆಗೊಳಿಸಿಕೊಳ್ಳಬೇಕು.ಎಂದು ತಿಳಿಸಿದರು. ಗ್ರಾಮದ ಪ್ರಮುಖ ಬೀದಿಗಳಲ್ಲಿ ವಿದ್ಯಾರ್ಥಿಗಳು ನನ್ನ ಭಾರತ, ನನ್ನ ಮತ, ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಜಾಪ್ರಭುತ್ವದ ರಕ್ಷಣೆ ಹಾಗೂ ನಿಮ್ಮ ಮತ, ನಿಮ್ಮ ಹಕ್ಕು, ನಿಮ್ಮ ಭವಿಷ್ಯ ಎನ್ನುವ ಘೋಷಣೆಗಳೊಂದಿಗೆ ಮತಪಟ್ಟಿಯ ಪರಿಷ್ಕರಣೆ ಕುರಿತು ಜಾಗೃತಿ ಜಾಥದ ಮೂಲಕ ಗ್ರಾಮಸ್ಥರಲ್ಲಿ ಜಾಗೃತಿ ಮೂಡಿಸಿದರು.

ಲೋಯೋಲ ಕಾಲೇಜಿನ ಎನ್. ಎಸ್. ಎಸ್. ಕಾರ್ಯಕ್ರಮಾಧಿಕಾರಿ ದೇವಣ್ಣ ಹಾಗೂ ಸ್ವಯಂಸೇವಕರು ಮತ್ತು ಮತದಾರರ ಸಾಕ್ಷರತಾ ಸಂಘದ ಸದಸ್ಯರು ಭಾಗವಹಿಸಿದರು.

# ಸಂಪುಟ ವಿಸ್ತರಣೆ ದೆಹಲಿಯಲ್ಲಿ ಸಭೆ

ಇಂದಿನ ಸಭೆಯಲ್ಲಿ ಕಾಂಗ್ರೆಸ್ ವರಿಷ್ಠ ಹಾಗೂ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿಗಳಾದ ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲಾ ಇವರೆಲ್ಲಾ ಭಾಗಿಯಾಗಲಿದ್ದು, ಸಚಿವರ ಪಟ್ಟಿಗೆ ಇಂದೇ ಮೋಕ್ಷ ಸಿಗುವ ಸಾಧ್ಯತೆಗಳು ಹೆಚ್ಚಿವೆ.ರಾಜ್ಯ ಸಚಿವ ಸಂಪುಟದಲ್ಲಿ 20 ಸ್ಥಾನಗಳು ಖಾಲಿ ಇದ್ದು, ಆ ಸ್ಥಾನಗಳಿಗೆ 35 ಕ್ಕೂ ಹೆಚ್ಚು ಶಾಸಕರು ಆಕಾಂಕ್ಷಿಗಳಾಗಿದ್ದಾರೆ. ಹಾಗಾಗಿ ಸಚಿವರ ಪಟ್ಟಿ ಅಂತಿಮಗೊಳಿಸುವುದು ವರಿಷ್ಠರಿಗೆ ತಲೆ ನೋವು ತಂದಿದ್ದು, ಇದರ ಜತೆಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಹರಿಪ್ರಸಾದ್ ಸಹ ತಮ್ಮ ಕಟ್ಟಾ ಬೆಂಬಲಿಗ ಶಾಸಕರಿಗೂ ಸಚಿವ ಸ್ಥಾನ ಬೇಕು ಎಂದು ಪಟ್ಟು ಹಿಡಿದಿದ್ದು, ಸಚಿವರ ಪಟ್ಟಿ ಅಂತಿಮಗೊಳಿಸುವುದು ಗಜ ಪ್ರಸವದಂತಾಗಿದೆ.ಕಳೆದ ವಾರ ದೆಹಲಿಗೆ ತೆರಳಿದ್ದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಹರಿಪ್ರಸಾದ್ ಜತೆ ವರಿಷ್ಠರು ಸಚಿವರ ಪಟ್ಟಿಯನ್ನು ಅಂತಿಮಗೊಳಿಸುವ ಸಂಬಂಧ ಒಂದು ಸುತ್ತಿನ ಚರ್ಚೆ ನಡೆಸಿದ್ದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರ ಪುತ್ರನ ಆರೋಗ್ಯದಲ್ಲಿ ಏರುಪೇರಾದ ಕಾರಣ ಖರ್ಗೆ ಅವರು ಸಭೆಯನ್ನು ಮೊಟಕುಗೊಳಿಸಿ ಬೆಂಗಳೂರಿಗೆ ವಾಪಸ್ಸಾಗಿದ್ದರು. ಹಾಗಾಗಿ ಸಚಿವರ ಪಟ್ಟಿ ತಯಾರಿಸುವ ಚರ್ಚೆಯ ಸಭೆ ಅಪೂರ್ಣಗೊಂಡಿತ್ತು. ಇದಾದ ಬಳಿಕ ಕಾಂಗ್ರೆಸ್ ವರಿಷ್ಠ ರಾಹುಲ್‌ಗಾಂಧಿ ಅವರು ಖರ್ಗೆ ಅವರು ದೆಹಲಿಗೆ ಬಂದ ನಂತರ ಬುಲಾವ್ ಕಳುಹಿಸುತ್ತೇನೆ ಮುಂದಿನ ವಾರ ಬನ್ನಿ ಸಚಿವರ ಪಟ್ಟಿಯನ್ನು ಅಂತಿಮಗೊಳಿಸೋಣ ಎಂದು ರಾಜ್ಯ ನಾಯಕರಿಗೆ ಸೂಚಿಸಿದ್ದರು.ಅದರಂತೆ ನಿನ್ನೆ ದೆಹಲಿಗೆ ಬರುವಂತೆ ರಾಜ್ಯದ ಮೂವರು ನಾಯಕರಿಗೆ ಹೈಕಮಾಂಡ್ ಕರೆ ಮಾಡಿತ್ತು. ಹೈಕಮಾಂಡ್‌ನ ಬುಲಾವ್ ಮೇರೆಗೆ ಇಂದು ಬೆಳಗ್ಗೆ ಈ ಮೂವರು ಇಂದು ಬೆಳಗ್ಗೆ ದೆಹಲಿಗೆ ಬಂದಿಳಿದರು.

ಸಂಸತ್ ಅಧೀವೇಶನ ನಡೆಯುತ್ತಿರುವ ಕಾರಣ ಸಂಜೆಯ ಬಳಿಕವೇ ಸಚಿವರ ಪಟ್ಟಿ ತಯಾರಿಕೆ ಚರ್ಚೆಯ ಸಭೆ ನಡೆಯಲಿದೆ ಎಂದು ಕಾಂಗ್ರೆಸ್ ಮೂಲಗಳು ಹೇಳಿವೆ.

ಬಹುತೇಕ ಇಂದು ಸಚಿವರ ಪಟ್ಟಿ ಅಂತಿಮವಾಗಲಿದೆ ಶುಕ್ರವಾರ ಇಲ್ಲವೆ ಶನಿವಾರ ನೂತನ ಸಚಿವರ ಪದಗ್ರಹಣ ನಡೆಯಲಿದೆ.

ಸಚಿವಕಾಂಕ್ಷಿಗಳು ದೆಹಲಿಯಲ್ಲಿ ಮೊಕ್ಕಾಂ: ಶತಾಯ ಗತಾಯ ಸಚಿವರ ಸ್ಥಾನ ಪಡೆಯಲೇಬೇಕು ಎಂದು ಕಾಂಗ್ರೆಸ್‌ನ 30 ಕ್ಕೂ ಹೆಚ್ಚು ಶಾಸಕರು ದೆಹಲಿಯಲ್ಲೇ ಮೊಕ್ಕಾಂ ಹೂಡಿದ್ದಾರೆ.ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕೆಪಿಸಿಸಿ ಅಧ್ಯಕ್ಷ ಹರಿಪ್ರಸಾದ್ ಅವರು ದೆಹಲಿಗೆ ಬರುವ ಮುನ್ನ ನಿನ್ನೆ ಮತ್ತು ಮೊನ್ನೆ ಸುಮಾರು 25 ಕ್ಕೂ ಹೆಚ್ಚು ಶಾಸಕರು ದೆಹಲಿಗೆ ಆಗಮಿಸಿದ್ದು, ಸಚಿವ ಸ್ಥಾನಕ್ಕಾಗಿ ಲಾಬಿ ನಡೆಸಿದ್ದಾರೆ.

ಹೈಕಮಾಂಡ್ ಮಟ್ಟದಲ್ಲಿ ತಮಗಿರುವ ಪ್ರಭಾವವನ್ನು ಬಳಸಿಕೊಂಡು ಸಚಿವ ಸ್ಥಾನ ಗಿಟ್ಟಿಸಿಕೊಳ್ಳಲು ಶಾಸಕರು ಹರಸಾಹಸ ನಡೆಸಿದ್ದಾರೆ.ದೆಹಲಿಯಲ್ಲಿ ಈಗಾಗಲೇ ಶಾಸಕರಾದ ಆರ್.ವಿ. ದೇಶಪಾಂಡೆ, ಆರ್.ಬಿ. ತಿಮ್ಮಾಪುರ, ಬಸವರಾಜ ರಾಯರೆಡ್ಡಿ, ಹರ್ಷದ್ ರಿಜ್ವಾನ್, ಡಾ. ಅಜಯ್‌ಸಿಂಗ್, ಗೋಪಾಲಕೃಷ್ಣ ಬೇಳೂರು, ಅಶೋಕ ಪಟ್ಟಣ, ಆರ್.ಎಸ್. ಪಾಟೀಲ್, ಎನ್.ಎ. ಹ್ಯಾರೀಸ್, ಟಿ.ಬಿ. ಜಯಚಂದ್ರ, ಡಾ.ಹೆಚ್.ಡಿ. ರಂಗನಾಥ್, ಚಲುವರಾಯಸ್ವಾಮಿ, ಶಿವಾನಂದ ಪಾಟೀಲ್, ನರೇಂದ್ರಸ್ವಾಮಿ ಅಬ್ಬಯ್ಯ ಪ್ರಸಾದ್, ಅಲ್ಲಂಪ್ರಭು ಪಾಟೀಲ್, ವಿಜಯಾನಂದ ಕಾಶಪ್ಪನವರ್, ಎಂ.ವೈ. ಪಾಟೀಲ್, ಸೇರಿದಂತೆ ಹಲವು ಶಾಸಕರು ದೆಹಲಿಯಲ್ಲಿ ಇದ್ದು, ಸಚಿವ ಪಟ್ಟಕ್ಕಾಗಿ ಪ್ರಯತ್ನ ನಡೆಸಿದ್ದಾರೆ.

# ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಸಾರ್ವಜನಿಕರ ಸಹಕಾರ ಅಗತ್ಯ: ಡಿಹೆಚ್‌ಓ ಡಾ.ನಂದಿತಾ

ತಲುಪಿಸಲು ಎಲ್ಲ ಹಂತದಲ್ಲಿ ಸಮನ್ವಯ ಕೈಗೊಳ್ಳಲಾಗಿದೆ. ಒಂದು ತಾಲೂಕು-ಪ್ರತಿ ತಿಂಗಳು ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮ ಪರಿಶೀಲನೆಯನ್ನು ಜಿಲ್ಲಾ ಕಾರ್ಯಕ್ರಮ ಅನುಷ್ಠಾನ ಅಧಿಕಾರಿಗಳೊಂದಿಗೆ ಪ್ರತಿ ತಿಂಗಳು ಒಂದು ತಾಲೂಕಿನಗೆ ತೆರಳಿ ಅಲ್ಲಿನ ವೈದ್ಯಾಧಿಕಾರಿಗಳೊಂದಿಗೆ ಸಭೆ ಹಮ್ಮಿಕೊಂಡು ಅಲ್ಲಿನ ವ್ಯವಸ್ಥೆಗೆ ಇನ್ನಷ್ಟು ಬಲ ನೀಡಲು ಕ್ರಮ ವಹಿಸಲಾಗಿದೆ.ತಾಯಿ ಮಗುವಿನ ಅರೋಗ್ಯ ಸುರಕ್ಷತೆಗೆ ಹೆಚ್ಚಿನ ಒತ್ತು: ರಾಯಚೂರಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಜಿಲ್ಲೆಯ ಎಲ್ಲ ಪ್ರಾಥಮಿಕ ಆಸ್ಪತ್ರೆಗಳು, ತಾಲೂಕು ಆಸ್ಪತ್ರೆಗಳು ಹಾಗೂ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಸರಳ ಹೆರಿಗೆಗಾಗಿ ನುರಿತ ಪ್ರಸೂತಿ ತಜ್ಞರು, ಮಕ್ಕಳ ತಜ್ಞರು ಶೂಶ್ರೂಷಕರು ಹಾಗೂ ಇತರ ಸಿಬ್ಬಂದಿಯರಿಂದ ಗುಣಮಟ್ಟದ ಸೇವೆ ನೀಡಲಾಗುತ್ತಿದ್ದು, ಲಿಂಗಸುಗೂರಿನಲ್ಲಿ ಸದ್ಯದಲ್ಲಿಯೇ ತಾಯಿ ಮಕ್ಕಳ ಅಸ್ಪತ್ರೆಯು ಉದ್ಘಾಟನೆಯಾಗಲಿದೆ. ದೇವದುರ್ಗದಲ್ಲಿ ಭೂಮಿ ಪೂಜೆಗೆ ಸಿದ್ದತೆ ಮಾಡಲಾಗುತ್ತಿದೆ. ಈ ಎರಡು ತಾಲೂಕುಗಳಲ್ಲಿ ಸಾರ್ವಜನಿಕ ಆಸ್ಪತ್ರೆಯಲ್ಲಿಯೆ ತಜ್ಞರಿಂದ ಸೇವೆ ನೀಡಲಾಗುತ್ತಿದೆ. ಮನೆಗೆ ನಗು-ಮಗು ವಾಹನದ ಮೂಲಕ ಉಚಿತವಾಗಿ ತಾಯಿ ಮತ್ತು ಮಗುವನ್ನು ಕಳುಹಿಸಿ ಕೊಡಲಾಗುತ್ತಿದೆ.

ಪ್ರಧಾನಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ: ಹೆರಿಗೆಯ ಸುರಕ್ಷತೆಗಾಗಿ ಗಂಡಾಂತರ ಗರ್ಭಿಣಿಯರನ್ನು ಪ್ರತಿ ತಿಂಗಳು 9ನೇಯ ಹಾಗೂ 24ನೇಯ ತಾರಿಖು ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ತಪಾಸಣೆ ಮಾಡಲಾಗುತ್ತಿದ್ದು, ಇದಕ್ಕಾಗಿ ಖಾಸಗಿ ಆಸ್ಪತ್ರೆಯ ಪ್ರಸೂತಿ ತಜ್ಞರ ಸೇವೆಯನ್ನು ಪಡೆಯಲಾಗುತ್ತಿದೆ. ಮಕ್ಕಳ ಬೆಳವಣಿಗೆಯ ಕುಂಠಿತಕ್ಕೆ ಕಾರಣವಾಗುವ ಅಂಶಗಳನ್ನು ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮದಡಿ ಆರ್‌ಬಿಎಸ್‌ಕೆ ವೈದ್ಯರು ಡಿಇಐಸಿ ಕೇಂದ್ರಕ್ಕೆ ಕರೆತಂದು ಮಕ್ಕಳ ತಜ್ಞರಿಂದ ಪರೀಕ್ಷಿಸಿ ಚಿಕಿತ್ಸೆ ಅಗತ್ಯವಿರುವ ಮಕ್ಕಳನ್ನು ಸರಕಾರಿ ಹಾಗೂ ನೊಂದಾಯಿತ ಖಾಸಗಿ ಆಸ್ಪತ್ರೆಗಳಿಗೆ ಕಳುಹಿಸುವ ವ್ಯವಸ್ಥೆ ಕಲ್ಪಿಸಲಾಗಿದೆ. ರೋಗಗಳ ನಿಯಂತ್ರಣಕ್ಕೆ ತೀವ್ರ ನಿಗಾ: ಸೋಂಕಿತ ಸೊಳ್ಳೆಗಳ ಕಚ್ಚುವಿಕೆಯಿಂದ ಹರಡುವ ಡೆಂಗ್ಯು, ಚಿಕೂನ್ ಗುನ್ಯಾ, ಮಲೇರಿಯಾ, ಆನೆಕಾಲು ರೋಗ, ಮೆದುಳು ಜ್ವರ ತಡೆಗೆ ಸಮರೋಪಾದಿಯಲ್ಲಿ ಮನೆ ಬೇಟಿ ಮೂಲಕ ಲಾರ್ವಾ ಸಮೀಕ್ಷೆ, ಮನೆ ಒಳಗೆ ಕಿಟ ನಾಶಕ ಸಿಂಪರಣೆ ಹಾಗೂ ಭಾದಿತ ಗ್ರಾಮಗಳಲ್ಲಿ ಔಷಧಿ ಯುಕ್ತ ಸೊಳ್ಳೆ ಪರದೆ ವಿತರಣೆ ಮಾಡಲಾಗಿದೆ. ಮುಂಜಾಗ್ರತೆಗಾಗಿ ಜಿಲ್ಲೆಯ ಜನತೆಗೆ ನಿರಂತರ ಜಾಗೃತಿ ನೀಡಲಾಗುತ್ತಿದೆ. ಅಲ್ಲದೇ ಆನೆಕಾಲು ರೋಗ ಪತ್ತೆ ಹಚ್ಚಲು ರಾತ್ರಿ ವೇಳೆ ರಕ್ತ ಲೇಪನ ಕೈಗೊಂಡು ರೋಗ ನಿರ್ಮೂಲನೆಗೆ ಇಲಾಖೆಯಿಂದ ಶ್ರಮಿಸಲಾಗುತ್ತದೆ.

ಕಲುಷಿತ ನೀರಿನಿಂದ ಹರಡುವ ವಾಂತಿ ಭೇದಿ ತಡೆಗೆ ಕ್ರಮ: ಜಿಲ್ಲೆಯಲ್ಲಿ ಕಲುಷಿತ ನೀರು ಸೇವನೆಯಿಂದ ಹರಡಬಹುದಾದ ವಾಂತಿ-ಭೇದಿ, ಕಾಲರಾ ಮುಂತಾದ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕಾಗಿ ಎಲ್ಲ ನೀರಿನ ಮೂಲಗಳ ಪರೀಕ್ಷೆಯನ್ನು ಮಾಡಲಾಗುತ್ತಿದ್ದು, ಸ್ಥಳೀಯ ಸಂಸ್ಥೆಗಳೊಂದಿಗೆ ಕ್ಲೋರಿನೇಷನ್ ಕೈಗೊಳ್ಳಲು ತಾಂತ್ರಿಕ ಸಹಕಾರವನ್ನು ನೀಡಲಾಗುತ್ತಿದೆ. ಅಲ್ಲದೆ ಸಕ್ಕರೆ ಕಾಯಿಲೆ, ರಕ್ತದೊತ್ತಡ ಸೇರಿದಂತೆ ಅಸಾಂಕ್ರಾಮಿಕ ಖಾಯಿಲೆಗಳ ನಿಯಂತ್ರಣಕ್ಕಾಗಿ 30 ವರ್ಷ ಮೇಲ್ಪಟ್ಟ ವ್ಯಕ್ತಿಗಳು ಕನಿಷ್ಠ ಪ್ರತಿ 6 ತಿಂಗಳಿಗೊಮ್ಮೆ ರಕ್ತದೊತ್ತಡ, ಸಕ್ಕರೆ ಕಾಯಿಲೆ, ಗ್ರಾಮೀಣ ಭಾಗದಲ್ಲಿ ಆಯುಷ್ಮಾನ್ ಅರೋಗ್ಯ ಕೇಂದ್ರಗಳಲ್ಲಿ ತಪಾಸಣೆಗೆ ಸಿಹೆಚ್‌ಓ ಮೂಲಕ ಪರೀಕ್ಷಿಸಿ ವೈದ್ಯರಿಂದ ಖಚಿತ ಪಟ್ಟಲ್ಲಿ ಉಚಿತವಾಗಿ ಔಷಧಿ ವಿತರಿಸುವ ವ್ಯವಸ್ಥೆ ಕಲ್ಪಿಸಲಾಗಿದೆ. ಇದರೊಂದಿಗೆ ಕ್ಯಾನ್ಸರ್, ಪಾರ್ಶವಾಯು ಹಾಗೂ ಇತರೆ ಸಾಂಕ್ರಾಮಿಕ ರೋಗಗಳ ತಪಾಸಣೆ ಹಾಗೂ ಚಿಕಿತ್ಸೆಯನ್ನು ನೀಡಲಾಗುವುದು.ಜಿಲ್ಲೆಯಲ್ಲಿ 11 ದೃಷ್ಠಿಕೇಂದ್ರಗಳು: ಮನೆ ಬಾಗಿಲೆಗೆ ಕ್ಷೇತ್ರ ಸಿಬ್ಬಂದಿ ತೆರಳಿ ದೃಷ್ಠಿದೋಷ ಗುರ್ತಿಸಿ ಅಗತ್ಯವುಳ್ಳವರಿಗೆ ಉಚಿತವಾಗಿ ಕನ್ನಡಕ ವಿತರಿಸಲು ಸುಸಜ್ಜಿತ 11 ದೃಷ್ಠಿ ಕೇಂದ್ರಗಳನ್ನು ಆರಂಭಿಸಲಾಗಿದೆ. ಅಲ್ಲದೆ ಉಚಿತವಾಗಿ ಕಣ್ಣಿನಪೊರೆ ಶಸ್ತ್ರ ಚಿಕಿತ್ಸೆಯನ್ನು 4 ತಾಲೂಕಾ ಸಾರ್ವಜನಿಕ ಆಸ್ಪತ್ರೆಗಳು, ರಿಮ್ಸ್ ಆಸ್ಪತ್ರೆ ಸೇರಿದಂತೆ 03 ನೋಂದಾಯಿತ ಸ್ವಯಂ ಸೇವಾ ಸಂಸ್ಥೆಗಳಿಂದ ಸಹ ನಿಯಮಿತವಾಗಿ ಕಣ್ಣಿನಪೊರೆ ಶಸ್ತ್ರ ಚಿಕಿತ್ಸೆಯನ್ನು ಕೈಗೊಳ್ಳಲಾಗುತ್ತಿದೆ.ಹೆಣ್ಣು ಭ್ರೂಣ ತಡೆಗೆ ಕ್ರಮ: ಹೆಣ್ಣು ಭ್ರೂಣ ತಡೆಗೆ ಪಿಸಿಪಿಎನ್‌ಡಿಟಿ ಕಾಯ್ದೆ-1994 ಅನುಷ್ಠಾನದ ಕುರಿತು ಜಿಲ್ಲೆಯ ಎಲ್ಲ ಸ್ಕ್ಯಾನಿಂಗ್ ಕೇಂದ್ರಗಳಲ್ಲಿ ಗರ್ಭಿಣಿಯ ಸ್ಕ್ಯಾನಿಂಗ್ ಮಾಡಿಸುವಾಗ ಎಲ್ಲಾದರೂ ಹೆಣ್ಣು ಭ್ರೂಣ ಪತ್ತೆ ಕುರಿತು ಮಾಹಿತಿ ನೀಡುತ್ತಿರುವ ಬಗ್ಗೆ ನಿಯಮಿತ ವರದಿ ಪರಿಶೀಲನೆ ಹಾಗೂ ಗೌಪ್ಯ ಕಾರ್ಯಾಚರಣೆ ಕೈಗೊಳ್ಳಲಾಗುತ್ತಿದೆ. ಅಲ್ಲದೆ ಕೆಪಿಎಮ್‌ಇ ಕಾಯ್ದೆ-2007ರಡಿ ಎಲ್ಲ ಖಾಸಗಿ ಕ್ಲಿನಿಕ್, ಆಸ್ಪತ್ರೆಗಳು, ನರ್ಸಿಂಗ್ ಹೋಮ್‌ಗಳು, ಡಯಾಗ್ನೊಸ್ಟಿಕ್ಸ್ ಸೆಂಟರ್‌ಗಳ ನೋಂದಣಿಯನ್ನು ನಿಯಮಾನುಸಾರ ಮಾಡಲು ಹಾಗೂ ಅರ್ಹ ವಿದ್ಯಾರ್ಹತೆ ಇಲ್ಲದ ನಕಲಿ ವೈದ್ಯರ ವಿರುದ್ದ ಜಿಲ್ಲಾ ಸಕ್ಷಮ ಪ್ರಾಧಿಕಾರ ಮಾರ್ಗದರ್ಶನದಲ್ಲಿ ಕ್ರಮ ಜರುಗಿಸಲಾಗುವುದು. ಜಿಲ್ಲೆಯಲ್ಲಿ ಬಾಲ್ಯದಲ್ಲಿ ಗರ್ಭಿಣಿಯಾಗುವುದರಿಂದ ಉಂಟಾಗುವ ಆರೋಗ್ಯದ ಗಂಭೀರ ಸಮಸ್ಯೆಗಳ ಬಗ್ಗೆ ಆರೋಗ್ಯ ಶಿಕ್ಷಣ ಹಾಗೂ ಬಾಲ್ಯವಿವಾಹ ತಡೆಗೆ ಜಾಗೃತಿ ಮತ್ತು ಮಕ್ಕಳ ಸಹಾಯವಾಣಿ 1098ಗೆ ಮಾಹಿತಿ ನೀಡುವವರ ವಿವರವನ್ನು ಗೌಪ್ಯವಾಗಿಡಲಾಗುವುದು.

ಎಬಿಎಆರ್‌ಕೆ ಅಡಿ ಉನ್ನತ ಮಟ್ಟದ ಆಸ್ಪತ್ರೆಗಳಲ್ಲಿ ಚಿಕಿತ್ಸೆ: ರಾಯಚೂರು ಜಿಲ್ಲೆಯ ಸಾರ್ವಜನಿಕರಿಗೆ ಈಗಾಗಲೇ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ಗುಣಮಟ್ಟದ ಆರೋಗ್ಯ ಸೇವೆ ನೀಡಲಾಗುತ್ತಿದ್ದು, ಒಂದು ವೇಳೆ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಅವಶ್ಯಕವಿದ್ದರೆ ರಾಯಚೂರು ಜಿಲ್ಲೆಯಲ್ಲಿ 12 ಆಸ್ಪತ್ರೆಗಳು ಸೇರಿದಂತೆ ರಾಜ್ಯದ ವಿವಿಧೆಡೆವಿರುವ 3569 ಆಸ್ಪತ್ರೆಗಳಲ್ಲಿ ಎಬಿಎಆರ್‌ಕೆ ಅಡಿ ಉನ್ನತ ಮಟ್ಟದ ಚಿಕಿತ್ಸೆಗೆ ಅವಕಾಶ ಮಾಡಲಾಗಿದೆ. ಬಿಪಿಎಲ್ ಕುಟುಂಬಗಳಿಗೆ ವಾರ್ಷಿಕ 5 ಲಕ್ಷ ಹಾಗೂ ಎಪಿಎಲ್ ಕುಟುಂಬದವರಿಗೆ 1.5 ಲಕ್ಷ ವರೆಗೆ ಸೌಲಭ್ಯ ಲಭ್ಯವಿದ್ದು, ಸಾರ್ವಜನಿಕರು ಬಳಕೆ ಮಾಡಿಕೊಳ್ಳಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳಾದ ಡಾ.ನಂದಿತಾ ಎಮ್.ಎನ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ತಾಲೂಕು ವಾಲ್ಮೀಕಿ ನಾಯಕ ಸಮಾಜದ ನೂತನ ಅಧ್ಯಕ್ಷರಾಗಿ ಗುಂಡಿ ರಾಘವೇಂದ್ರ ಅಧಿಕಾರ ಸ್ವೀಕಾರ



**ಹೊಸಪೇಟೆ.ಜು.21** ತಾಲೂಕು ವಾಲ್ಮೀಕಿ ನಾಯಕ ಸಮಾಜದ ನೂತನ ಅಧ್ಯಕ್ಷರಾಗಿ ಗುಂಡಿ ರಾಘವೇಂದ್ರ ಅಧಿಕಾರ ಸ್ವೀಕಾರ ಮಾಡಿದರು.

ಸ್ಥಳೀಯ ಪುಣ್ಯಾನಂದಪುರಿ ಕಲ್ಯಾಣ ಮಂಟಪದಲ್ಲಿ ಸೋಮವಾರ ಜರುಗಿದ ಪದಗ್ರಹಣ ಸಮಾರಂಭದಲ್ಲಿ ತಾಲೂಕು ವಾಲ್ಮೀಕಿ ನಾಯಕ ಸಮಾಜದ ನೂತನ ಅಧ್ಯಕ್ಷರಾಗಿ ಗುಂಡಿ ರಾಘವೇಂದ್ರ ಅಧಿಕಾರ ಸ್ವೀಕಾರ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ತಾಲೂಕು ವಾಲ್ಮೀಕಿ ನಾಯಕ ಸಮಾಜದ ಎಲ್ಲಾ ಪದಾಧಿಕಾರಿಗಳು ಹಾಗೂ ನಿರ್ದೇಶಕರು, ಐದು ಕೇರಿ ದೈವದವರು ಹಾಗೂ ಸಮಾಜದ ಬಂಧುಗಳ ಸಹಕಾರದಿಂದ ಸಮಾಜದ ಅಭಿವೃದ್ದಿಗೆ ಪ್ರಾಮಾಣಿಕ ಪ್ರಯತ್ನ ನಡೆಸುವುದಾಗಿ ತಿಳಿಸಿದರು.

ಅಧಿಕಾರ ಹಸ್ತಾಂತರ ಮಾಡಿದ ಮಾಜಿ ಅಧ್ಯಕ್ಷ ಗೋಸಲ ಭರಮಪ್ಪ ಮಾತನಾಡಿ, ಈ ಹಿಂದೆ ತಾವು ಅಧ್ಯಕ್ಷರಾಗಲು ಅವಕಾಶ ಮಾಡಿಕೊಟ್ಟಿದ್ದು. ತಮ್ಮ ಅಧಿಕಾರವಧಿಯಲ್ಲಿ ಸಮಾಜದ ಅಭಿವೃದ್ದಿಗೆ ಶ್ರಮಿಸಿದ್ದು. ಒಪ್ಪಂದದಂತೆ ಅಧಿಕಾರ ಹಸ್ತಾಂತರ ಮಾಡಿದ್ದು. ಮೀಸಲಾತಿ ಹೆಚ್ಚಳ ಕುರಿತು ಹೋರಾಟ ಸೇರಿದಂತೆ ಸವಾಜದ ಅಭಿವೃದ್ದಿ ಕುರಿತ ಮುಂದಿನ ದಿನಗಳಲ್ಲಿ ಕೈಗೊಳ್ಳಲಿರುವ ಎಲ್ಲಾ ರೀತಿಯ ಹೋರಾಟಗಳಿಗೆ ನೂತನ ಅಧ್ಯಕ್ಷರೊಂದಿಗೆ ಇರುವುದಾಗಿ ತಿಳಿಸಿದರು.

ನೂತನ ಅಧ್ಯಕ್ಷರನ್ನು ತಾಲೂಕು ವಾಲ್ಮೀಕಿ ನಾಯಕ ಸಮಾಜದ ಪದಾಧಿಕಾರಿಗಳು, ನಿರ್ದೇಶಕರು, ಕೇರಿಗಳ ದೈವದವರು, ಸವಾಜದ ಮುಖಂಡರು, ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾರ-ತುರಾಯಿ ಹಾಕುವ ಮೂಲಕ ಅಭಿನಂದಿಸಿದರು.

ಪದಗ್ರಹಣ ಸಮಾರಂಭದಲ್ಲಿ ತಾಲೂಕು ವಾಲ್ಮೀಕಿ ನಾಯಕ ಸಮಾಜದ ಉಪಾಧ್ಯಕ್ಷ ಕಿನ್ನಾಳ ಹಮುಮಂತ, ಪ್ರಧಾನ ಕಾರ್ಯದರ್ಶಿ ದೇವರಮನೆ ಶ್ರೀನಿವಾಸ, ಸಹಕಾರ್ಯದರ್ಶಿ ಸಿಂದಿಗೇರಿ ದೇವೇಂದ್ರಪ್ಪ, ಖಜಾಂಚಿ ತಳವಾರ ದುಶ್ಯಂತ ಕುಮಾರ್, ನಿರ್ದೇಶಕರಾದ ಜಂಬಾನಳ್ಳಿ ವಸಂತ, ಗುಜ್ಜಲ ಶ್ರೀನಾಥ, ಎಸ್.ಎಸ್.ಚಂದ್ರಶೇಖರ್, ಗುಡಗುಂಟಿ ಮಲ್ಲಿಕಾರ್ಜುನ, ತಾರಿಹಳ್ಳಿ ವೆಂಕಟೇಶ್, ಡಿ. ನಾಗರಾಜ, ಮಹಾರಾಜ ಸೋಮೇಶ್, ಸಣ್ಣಕ್ಕಿ ಹುಲುಗಪ್ಪ, ಮಾಳಗಿ ವಸಂತ, ಹೊಸಕೆರೆ ವೆಂಕಟೇಶ್, ನಾಣಿಕೇರಿ ವೆಂಕಪ್ಪ, ಪರಶುರಾವು, ಸವಾಜದ ಮುಖಂಡರುಗಳಾದ ಬಂಡೆ ರಂಗಪ್ಪ, ಕಿಶೋರ್ ಕುಮಾರ್, ಗುಜ್ಜಲ ವಿಶ್ವವಾಥ, ವಾಲ್ಮೀಕಿ ಗುರುಪೀಠದ ಧರ್ಮದರ್ಶಿ ಬಿ.ಎಸ್.ಜಂಬಯ್ಯ ನಾಯಕ, ಸಿಟಿ ಬ್ಯಾಂಕ್ ಅಧ್ಯಕ್ಷ ಗುಂಡಿ ಪ್ರಶಾಂತ, ಕಿಚಿಡಿ ವಸಂತ, ದುರುಗಪ್ಪ ಪೂಜಾರಿ, ಗುಜ್ಜಲ ಚಂದ್ರಶೇಖರ್, ಕಟಿಗಿ ಜಂಬಯ್ಯ, ಕಟಿಗಿ ರಾಮಕೃಷ್ಣ, ಕಾಮಟಗಿ ನಾಗರಾಜ, ಜಂಬಾನಳ್ಳಿ ರಾಮಣ್ಣ, ಕೆ.ವಿಜಯ ಕುಮಾರ್, ಬಾಣದ ಬಸಪ್ಪ, ಬಾಣದ ಸುದರ್ಶನ ನಾಯಕ, ನಗರಸಭೆ ಮಾಜಿ ಅಧ್ಯಕ್ಷ ಗುಜ್ಜಲ ನಿಂಗಪ್ಪ, ಪರಶುರಾಮ, ಕರಿಹನುಮಂತ, ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಸಮಾಜದ ಬಂಧುಗಳು ಭಾಗವಹಿಸಿದ್ದರು.

# ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಒತ್ತಾಯಿಸಿ ಪ್ರತಿಭಟನೆ, ಪ್ರತಿಭಟನಾಕಾರರ ಬಂಧನ, ಬಿಡುಗಡೆ



**ಹೊಸಪೇಟೆ.ಜು.21** ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದ ನೈತಿಕ ಹೊಣೆ ಹೊತ್ತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಒತ್ತಾಯಿಸಿ, ವಿಜಯನಗರ ಕಾಲೇಜು ಬಳಿ ಪ್ರತಿಭಟನೆಗೆ ಮುಂದಾಗಿದ್ದ, ವಿಜಯನಗರ ಜಿಲ್ಲಾ ಸಂವಿಧಾನ ಸಂರಕ್ಷಣಾ ಸಮಿತಿ ಪದಾಧಿಕಾರಿಗಳನ್ನು ಪೊಲೀಸರು ಬಂಧಿಸಿ, ಬಿಡುಗಡೆಗೊಳಿಸಿದ ಘಟನೆ ನಗರದಲ್ಲಿ ಸೋಮವಾರ ಜರುಗಿತು.

ಸಿಇಟಿ ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ಹಲವು ವಿದ್ಯಾರ್ಥಿಗಳ ಸಾವಿಗೆ ಕಾರಣರಾದವರನ್ನು ಕೂಡಲೇ ಬಂಧಿಸಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು ಹಾಗೂ ಇದರ ನೈತಿಕ ಹೊಣೆಹೊತ್ತು ಕೇಂದ್ರ ಶಿಕ್ಷಣ ಮಂತ್ರಿ ಧರ್ಮೇಂದ್ರ ಪ್ರಧಾನ ಅವರ ರಾಜೀನಾಮೆಗೆ ಒತ್ತಾಯಿಸಿ ವಿಜಯನಗರ ಕಾಲೇಜು ಬಳಿ ಸಂವಿಧಾನ ಸಂರಕ್ಷಣಾ ಸಮಿತಿ ಪದಾಧಿಕಾರಿಗಳು ಪ್ರತಿಭಟನೆಗೆ ಮುಂದಾಗಿದ್ದರು. ಆದರೆ ಪೊಲೀಸರು ಅಲ್ಲಿ ಪ್ರತಿಭಟನೆಗೆ ಅವಕಾಶ ನೀಡಲಿಲ್ಲ. ಈ ಸಂದರ್ಭದಲ್ಲಿ ಪೊಲೀಸರು ಹಾಗೂ ಪ್ರತಿಭಟನಾಕಾರರ ನಡುವೆ ಮಾತಿನ ಚಕಮಕಿ ಜರುಗಿತು. ಪೊಲೀಸರು ಪ್ರತಿಭಟನೆಗೆ ಮುಂದಾಗಿದ್ದ ಸಮಿತಿ ಮುಖಂಡರಾದ ?? ಸೋಮಶೇಖರ್ ಬಣ್ಣದಮನೆ, ವೈ. ರಾಮಚಂದ್ರ ಬಾಬು, ಟಿ.ವಾಸುದೇವ್, ಸಣ್ಣ ಮಾರಪ್ಪ, ಓಬಳೇಶ್, ಮರಿಸ್ವಾಮಿ, ಎನ್.ವೆಂಕಟೇಶ್, ಕೃಷ್ಣ ಮೊದಲಿಯರ್ ಬಂಧಿಸಿ ಕರೆದೊಯ್ದು ನಂತರ ಬಿಡುಗಡೆ ಮಾಡಿದರು.

ಬಿಡುಗಡೆಗೊಂಡ ನಂತರ ಪ್ರತಿಭಟನಾಕಾರರು ತಹಶೀಲ್ದಾರರ ಕಚೇರಿ ಬಳಿ ಬಂದು ಮತ್ತೆ ಪ್ರತಿಭಟನೆ ನಡೆಸಿ, ತಹಶೀಲ್ದಾರರ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡರುಗಳು ಪದೇ ಪದೇ ಪ್ರಶ್ನೆ ಪತ್ರಿಕೆಗಳು ಸೋರಿಕೆ ಆಗುತ್ತಿದ್ದು. ಇದರಿಂದ ವಿದ್ಯಾರ್ಥಿಗಳಿಗೆ ಹಾಗು ಪೋಷಕರಿಗೆ ಸಾಕಷ್ಟು ತೊಂದರೆ ಆಗುತ್ತಿದ್ದರೂ ಕ್ರಮ ಕೈಗೊಳ್ಳದ ಕೇಂದ್ರ ಸರ್ಕಾರದ ಕ್ರಮವನ್ನು ತೀವ್ರವಾಗಿ ಖಂಡಿಸಿದರು. ಈ ಹೋರಾಟ ಇಷ್ಟಕ್ಕೆ ನಿಲ್ಲಬಾರದು. ಮುಂದಿನ ದಿನಗಳಲ್ಲಿ ಪ್ರತಿ ಮನೆ ಮನೆಗೂ ಹೋರಾಟವನ್ನು ತಲುಪಿಸುವ ಕೆಲಸ ಮಾಡಬೇಕು. ಆ ಮೂಲಕ ಮನುವಾದಿ ಮನಸ್ಥಿತಿಯ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವನ್ನ ಕಿತ್ತೊಗೆಯಲು ಎಲ್ಲರೂ ಶ್ರಮಿಸಬೇಕು ಎಂದು ವಿವಿಧ ಸಂಘಟನೆಗಳ ಮುಖಂಡರು ಕರೆ ನೀಡಿದರು.

ನಮ್ಮ ಹೋರಾಟ ವ್ಯವಸ್ಥೆಯ ವಿರುದ್ದ ಹೊರತು ಪೊಲೀಸ್ ಇಲಾಖೆ ವಿರುದ್ದ ಅಲ್ಲ ಎಂದು ಹೋರಾಟಗಾರರು ಸ್ಪಷ್ಟಪಡಿಸಿದರು. ಇದೇ ಸಂದರ್ಭದಲ್ಲಿ ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆಯಾಗಿ ಪರೀಕ್ಷೆ ರದ್ದುಗೊಂಡ ಹಿನ್ನಲೆಯಲ್ಲಿ ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿಗಳಿಗೆ ಒಂದು ನಿಮಿಷ ಮೌನಾಚರಣೆ ಮಾಡುವ ಮೂಲಕ ಶ್ರದ್ದಾಂಜಲಿ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ಮುಖಂಡರಾದ ಸೋಮಶೇಖರ್ ಬಣ್ಣದ ಮನೆ, ಮರಡಿ ಜಂಬಯ್ಯ ನಾಯಕ, ಬಿ.ತಾಯಪ್ಪ ನಾಯಕ, ಎನ್. ವೆಂಕಟೇಶ್, ವೈ. ರಾಮಚಂದ್ರ ಬಾಬು, ಪೀರ್ ಬಾಷಾ, ವಿಶಾಲ್ ಮಾಸ್ಟರ್, ವಾಸುದೇವ್, ಕೃಷ್ಣ ಮೊದಲಿಯರ್, ಓಬಳೇಶ್, ನೂರ್ ಅಹ್ಮದ್, ಹುಸೇನ್, ಜಾವೇದ್, ಮರಿಸ್ವಾಮಿ, ಸಣ್ಣ ಮಾರೆಪ್ಪ, ಸಣ್ಣ ಈರಣ್ಣ, ಜೆಸಿ ಈರಣ್ಣ, ಪವನ್, ನಾಗರತ್ನಮ್ಮ, ಆರ್.ಎಸ್. ಬಸವರಾಜ್, ಆರ್.ಭಾಸ್ಕರ್ ರೆಡ್ಡಿ, ಸಜ್ಜತ್ ಖಾನ್, ರಾಮ್ ಮೋಹನ್, ವೀರಭದ್ರ ನಾಯಕ, ಪ್ರಮೋದ್ ಪುಣ್ಯಮೂರ್ತಿ, ಪ್ರಕಾಶ್, ಇಂತಿಯಾಜ್ ಸೇರಿದಂತೆ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಪ್ರತಿಭಟನೆ ಹಿನ್ನಲೆಯಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರ ಎಸ್.ಜಾಹ್ನವಿ, ಅಡಿಷನಲ್ ಎಸ್ಪಿ ಜಿ.ಮಂಜುನಾಥ ಮಾರ್ಗದರ್ಶನದಲ್ಲಿ ಡಿವೈಎಸ್ಪಿ ಪಿ.ಮುರಳೀಧರ್ ನೇತೃತ್ವದಲ್ಲಿ ಪಿಐ ಗಳಾದ ಫೈಜುಲ್ಲಾ, ಡಿ.ಹುಲುಗಪ್ಪ, ಸೋಮ್ಲಾ ನಾಯ್ಕ, ರಾಜೇಶ್ ಬಟಗುರ್ಕಿ ಮತ್ತವರ ಸಿಬ್ಬಂದಿ ಭಾರಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಿದ್ದರು.

ಧೈರ್ಯದ ದಾರಿ

ಬುಧವಾರ: 22-07-2026

## ದೇಶ ಕಂಡ ಅಪ್ರತಿಮ ಗಾಯಕಿ ಗಾನಕೋಗಿಲೆ ಡಾ. ಎಸ್.ಜಾನಕಿ ಅಮ್ಮ



**ಕಲಬುರಗಿ:ಜು.21:** ನಗರದ ನ್ಯೂ ರಾಘವೇಂದ್ರ ಕಾಲೋನಿ, ಕೃಷಿ ಬಡಾವಣೆಯ ಶಿವಮಂದಿರದಲ್ಲಿ ಶ್ರೀ ಈಶ್ವರ ದೇವಸ್ಥಾನ ಟ್ರಸ್ಟ್ ಕಮೀಟಿ ಹಾಗೂ ಸ್ವರಾಂಜಲಿ ಮೆಲೋಡಿಸ್, ಕಲಬುರಗಿ ವತಿಯಿಂದ 17 ಭಾಷೆಗಳಲ್ಲಿ 48000 ಸಾವಿರಕ್ಕಿಂತ ಹೆಚ್ಚು ಹಾಡುಗಳನ್ನು ಹಾಡಿ ಜನಮಾನಸದಲ್ಲಿ ಅಚ್ಚಳಿಯದೇ ಉಳಿದಿರುವ ಗಾನಕೋಗಿಲೆ, ಸರಸ್ವತಿ ಪುತ್ರಿ, ಖ್ಯಾತ ಗಾಯಕಿ ಡಾ. ಎಸ್.ಜಾನಕಿ ಅಮ್ಮನವರಿಗೆ ಖ್ಯಾತ ಸಂಗೀತ ಕಲಾವಿದರಿಂದ ಗಾನಸುಧೆ ಶ್ರದ್ಧಾಂಜಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಎಸ್.ಜಾನಕಿಯವರ ಭಾವಚಿತ್ರಕೆ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮ ಪ್ರಾರಂಭಿಸಲಾಯಿತು. ಅಧ್ಯಕ್ಷತೆ ವಹಿಸಿದ್ದ ದೇವಸ್ಥಾನ ಟ್ರಸ್ಟ್ ಅಧ್ಯಕ್ಷರಾದ ರೇವಣಸಿದ್ದಪ್ಪ ಬಿದನೂರ ಅವರು ಮಾತನಾಡಿ ಜಾನಕಿ ಅಮ್ಮನವರು ಹಾಡಿರುವ ಒಂದೊಂದು ಹಾಡುಗಳು ಮನಸಿಗೆ ಮುದನೀಡುವ, ರಸಿಕರಿಗೆ ಪುಟಿದೇಳಿಸುವ, ಮಕ್ಕಳ ಧ್ವನಿ ಅನುಕರಣೆ ಮಾಡಿ ಹಾಡುವ ಶೈಲಿಯನ್ನು ಹೊಂದಿದ, ಕಿರಿಯರ ಧ್ವನಿಗೆ ಕಿರಿಯರಾಗಿ, ಹಿರಿಯರ ಧ್ವನಿಗೆ ಹಿರಿಯರಾಗಿ ಎಲ್ಲಾ ನಾಯಕ, ನಾಯಕರಿಗೆ, ಎಲ್ಲಾ ದಿಗ್ಗಜ ಗಾಯಕರಾದ ಡಾ. ರಾಜಕುಮಾರ, ಪಿ.ಬಿ.ಶ್ರೀನಿವಾಸ, ಸ್ವರಮಾಂತ್ರಿಕ ಎಸ್.ಪಿ.ಬಿ, ಜೇಸುದಾಸ, ಬಪ್ಪಿ ಲಹರಿ, ಕಿಶೋರಕುಮಾರ ಅವರೊಂದಿಗೆ ಹಾಡುವ ಮೂಲಕ ಸಂಗೀತ ಕ್ಷೇತ್ರಕ್ಕೆ ತಮ್ಮ ಅಪಾರ ಕೊಡುಗೆಯನ್ನು ನೀಡಿ ನಮ್ಮಿಂದ ಅಗಲಿದ್ದಾರೆ. ಅವರು ಮತ್ತೊಮ್ಮೆ ನಮ್ಮ ಕರ್ನಾಟಕದಲ್ಲಿಯೇ ಹುಟ್ಟಿ ಬರಲೆಂದು ತಮ್ಮ ಶ್ರದ್ಧಾಂಜಲಿಯ ನುಡಿ–ನಮನಗಳನ್ನು ಸಲ್ಲಿಸಿದರು.

ಇವರೊಂದಿಗೆ ವೇದಿಕೆ ಮೇಲೆ ಕಾರ್ಯದರ್ಶಿಗಳಾದ ಸುವರ್ಣ ಕನಕರೆಡ್ಡಿ ಯಾದವ ಮತ್ತು ಸಂಗೀತ ಕಲಾವಿದರಾದ ರವೀಂದ್ರ ಕುಲಕರ್ಣಿ, ಲಕ್ಷ್ಮೀ ಕುಲಕರ್ಣಿ, ಸುಜಾತಾ ಕುಲಕರ್ಣಿ, ರಂಜಿತಾ ಜಮಾದಾರ, ಶಂಕರ ಹಿರೇಮಠ ಹಾಗೂ ಸ್ವರಾಂಜಲಿ ಮೆಲೋಡಿನ ಸಿದ್ಧರಾಮ ಹಂಚನಾಳ ಉಪಸ್ಥಿತರಿದ್ದರು. ಅತಿಥಿಗಳ ಗೌರವ ಸತ್ಕಾರದಲ್ಲಿ ಡಾ. ಎಸ್.ಜಾನಕಿ ಅಮ್ಮನವರ ಭಾವಚಿತ್ರ ನೆನಪಿನ ಕಾಣಿಕೆ ನೀಡಲಾಯಿತು.

ಕಲಾವಿದರು ಎಸ್.ಜಾನಕಿ ಅವರು ಹಾಡಿರುವ ಹಾಡುಗಳಾದ ಶಿವ ಶಿವ ಮಹಾದೇವ ಹೃತ್ಕಮಲವಾಸ, ಪೂಜಿಸಲೆಂದೇ ಹೂಗಳ ತಂದೆ, ಬಾನಲ್ಲೂ ನೀನೆ ಭೂವಿಯಲ್ಲೂ ನೀನೆ, ಒಮ್ಮೆ ನಿನ್ನನ್ನು ಕಣ್ತುಂಬ, ದೇವರ ಆಟ ಬಲ್ಲವರಾರು, ಮಧುಮಾಸ ಚಂದ್ರಮ, ನೀ ಮೀಟಿದ ನೆನಪೆಲ್ಲವು, ಜೀವ ಹೂವಾಗಿದೆ, ನನ್ನ ಆಸೆ ಹಣ್ಣಾಗಿ, ಪ್ಯಾರ ಬಿನಾ ಚೈನ್ ಕಹಾಂ ರೇ ಗೀತೆಗಳನ್ನು ಹಾಡುವ ಮೂಲಕ ಅಭಿಮಾನಿಗಳ, ಸಂಗೀತಾಸಕ್ತರ ಹಾಗೂ ಬಡಾವಣೆಯ ನಾಗರಿಕರ ಪ್ರೀತಿಗೆ ಪಾತ್ರರಾದರು.

ಈ ಕಾರ್ಯಕ್ರಮದಲ್ಲಿ ಈಶ್ವರ ದೇವಸ್ಥಾನ ಟ್ರಸ್ಟ್ ಪದಾಧಿಕಾರಿಗಳು, ಅಕ್ಕನ ಬಳಗದ ಸರ್ವ ಸದಸ್ಯರು, ಸಂಗೀತಾಸಕ್ತರು, ಅಭಿಮಾನಿಗಳು, ಬಡಾವಣೆಯ ನಾಗರಿಕರು, ಮುದ್ದುಮಕ್ಕಳು ಆಗಮಿಸಿ ನಮ್ಮಿಂದ ಅಗಲಿದ ಹೆಮ್ಮೆಯ ಗಾಯಕಿಗೆ ಪುಷ್ಪಾರ್ಚನೆಗೈಯುವ ಮೂಲಕನ ನಮನಗಳನ್ನು ಸಲ್ಲಿಸಿದರು. ಸಿದ್ಧರಾಮ ಹಂಚನಾಳ ನಿರೂಪಿಸಿದರು. ಟ್ರಸ್ಟ್‌ನ ಉಪಾಧ್ಯಕ್ಷರಾದ ದಿನಕರ ಮೂಲಗೆ ವಂದಿಸಿದರು.

## ಲಿಂಗತ್ವ ಅಲ್ಪಸಂಖ್ಯಾತ ಮಹಿಳೆಯರ ಸಬಲೀಕರಣಕ್ಕೆ ಆಶಾಕಿರಣದ ವಿನೂತನ ಯೋಜನೆ



**ಯಾದಗಿರಿ:ಜು.21:** ಲಿಂಗತ್ವ ಅಲ್ಪಸಂಖ್ಯಾತ ಮಹಿಳೆಯರು ಭಿಕ್ಷಾಟನೆ ಹಾಗೂ ಲೈಂಗಿಕ ವೃತ್ತಿಯಿಂದ ಹೊರಬಂದು ಸ್ವಾವಲಂಬಿ ಜೀವನ ನಡೆಸುವ ಉದ್ದೇಶದಿಂದ ಯಾದಗಿರಿಯ ಆಶಾಕಿರಣ ಸಾಮಾಜಿಕ ಸೇವಾ ಸಂಸ್ಥೆ ಹಾಗೂ ಎಸ್‌ಎಫ್ ಸಂಯುಕ್ತವಾಗಿ ವಿನೂತನ ಜೀವನೋಪಾಯ ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ.

ಕಳೆದ ಆರು ತಿಂಗಳಿಂದ ಸುಮಾರು 40 ಮಂದಿ ಲಿಂಗತ್ವ ಅಲ್ಪಸಂಖ್ಯಾತ ಮಹಿಳೆಯರಿಗೆ ವಿವಿಧ ಕೌಶಲ್ಯಾಭಿವೃದ್ಧಿ ಮತ್ತು ಸ್ವಯಂ ಉದ್ಯೋಗ ತರಬೇತಿಗಳನ್ನು ನೀಡಲಾಗುತ್ತಿದೆ. ಜೊತೆಗೆ ಗ್ರಾಮೀಣ ಭಾಗದ ಮಹಿಳೆಯರಿಗೆ ಕುರಿ ಸಾಕಣೆ, ಕೋಳಿ ಸಾಕಣೆ, ಹೈನುಗಾರಿಕೆ ಸೇರಿದಂತೆ ವಿವಿಧ ಆದಾಯೋತ್ಪಾದಕ ಚಟುವಟಿಕೆಗಳನ್ನು ಆರಂಭಿಸಲು ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ದೊರಕುವಂತೆ ಸಂಸ್ಥೆ ನೆರವು ನೀಡುತ್ತಿದೆ.ಈ ಯೋಜನೆಯ ಭಾಗವಾಗಿ 'ಬೆಣ್ಣೆ ಅಂಗಳ' ವತಿಯಿಂದ ತಯಾರಿಸಲಾದ ಬನ್ ಮಾಸ್ಕಾ ಉತ್ಪನ್ನಕ್ಕೆ ಸಾರ್ವಜನಿಕರ ಪ್ರತಿಕ್ರಿಯೆ ಅರಿಯುವ ಉದ್ದೇಶದಿಂದ ನಗರದ ಹೊಸ ಬಸ್ ನಿಲ್ದಾಣದ ಪಾದಚಾರಿ ಮಾರ್ಗದಲ್ಲಿ ಮಾರಾಟ ಕಾರ್ಯಕ್ರಮ ಆಯೋಜಿಸಲಾಯಿತು. ಸಾರ್ವಜನಿಕರು ಉತ್ಪನ್ನವನ್ನು ಖರೀದಿಸಿ ಪ್ರೋತ್ಸಾಹ ನೀಡಿದ ಹಿನ್ನೆಲೆಯಲ್ಲಿ ಭಾಗವಹಿಸಿದ ಮಹಿಳೆಯರಲ್ಲಿ ಆತ್ಮವಿಶ್ವಾಸ ಹೆಚ್ಚಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಮಾಯಾ ಎಸ್.ಆರ್. ನಾಯಕ, ಲಿಂಗತ್ವ ಅಲ್ಪಸಂಖ್ಯಾತ ಮಹಿಳೆಯರು ಸಮಾಜದಲ್ಲಿ ಘನತೆ ಮತ್ತು ಗೌರವದಿಂದ ಬದುಕು ಕಟ್ಟಿಕೊಳ್ಳಲು ಸ್ವಯಂ ಉದ್ಯೋಗವೇ ಶಾಶ್ವತ ಪರಿಹಾರವಾಗಿದೆ. ಇದೇ ಉದ್ದೇಶದಿಂದ ಸಂಸ್ಥೆ ತರಬೇತಿ, ಮಾರ್ಗದರ್ಶನ ಹಾಗೂ ಆರ್ಥಿಕ ಸಬಲೀಕರಣ ಕಾರ್ಯಕ್ರಮಗಳನ್ನು ನಿರಂತರವಾಗಿ ಅನುಷ್ಠಾನಗೊಳಿಸುತ್ತಿದ್ದು, ಇನ್ನಷ್ಟು ಮಹಿಳೆಯರನ್ನು ಮುಖ್ಯವಾಹಿನಿಗೆ ತರಲು ಪ್ರಯತ್ನಿಸಲಾಗುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಪ್ರಿಯಾಂಕಾ ಮ್ಯಾಗೇರಿ, ದೀಪಾ, ಮಂಜುಲ್ಕರ್, ಸಹನಾ, ಅರುಣಿತಾ, ಸ್ವಪ್ನಾ, ಭಾರತಿ ಹಾಗೂ ಎಂ.ಡಿ. ಸೋಹಿಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಎಸ್.ಎಸ್.ಕೆ. ಸಮಾಜದ ಪ್ರಾಂತಿಯವಿಭಾಗ ಮಟ್ಟದ ಸಭೆ: ಸಮಾಜದ ಅಭಿವೃದ್ಧಿಗೆ ಮಹತ್ವದ ನಿರ್ಣಯ



**ಕಲಬುರಗಿ,ಜು 21:**ಕರ್ನಾಟಕ ರಾಜ್ಯ ಎಸ್.ಎಸ್.ಕೆ. ಸಮಾಜ (ಬೆಂಗಳೂರು) ವತಿಯಿಂದ ಪ್ರಾಂತಿಯ ಹಾಗೂ ವಿಭಾಗ ಮಟ್ಟದ ಸಭೆಯು ಭಾನುವಾರ ನಗರದ ಶಹಾಬಜಾರದಲ್ಲಿರುವ ಶ್ರೀ ಜಗದಂಬಾ ಮಂದಿರದಲ್ಲಿ ವಿವಿಧ ಜಿಲ್ಲೆಗಳ ಪ್ರತಿನಿಧಿಗಳ ಸಮ್ಮುಖದಲ್ಲಿ ನಡೆಯಿತು.

ಕಾರ್ಯಕ್ರಮ ಆರಂಭಕ್ಕೂ ಮುನ್ನ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರ ಪತ್ನಿಯವರ ನಿಧನಕ್ಕೆ ಒಂದು ನಿಮಿಷ ಮೌನಾಚರಣೆ ಸಲ್ಲಿಸಲಾಯಿತು. ಬಳಿಕ ರಾಷ್ಟ್ರಗೀತೆ ಹಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ವೇದಿಕೆಯಲ್ಲಿದ್ದ ಗಣ್ಯರು ದೀಪ ಬೆಳಗಿಸುವ ಮೂಲಕ ಸಭೆಯನ್ನು ಉದ್ಘಾಟಿಸಿದರು.

ಸಭೆಯ ಅಧ್ಯಕ್ಷತೆಯನ್ನು ಡಾ. ಶಶಿಕುಮಾರ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ರಾಜ್ಯ ಎಸ್.ಎಸ್.ಕೆ. ಸಮಾಜದ ರಾಜ್ಯಸಭೆಯ ಸದಸ್ಯ ನಾರಾಯಣ ಭಾಂಡಗೆ (ಬಾಗಲಕೋಟ) ಹಾಗೂ ರಾಜ್ಯಾಧ್ಯಕ್ಷ ಶಶಿಕುಮಾರ್ ಮೆಹರವಾಡ ಅವರು ಭಾಗವಹಿಸಿ ಸಮಾಜದ ಸಂಘಟನೆ ಬಲವರ್ಧನೆ, ಶಿಕ್ಷಣ, ಯುವಜನರ ಸಬಲೀಕರಣ ಹಾಗೂ ಸಮಾಜದ ಸರ್ವಾಂಗೀಣ ಅಭಿವೃದ್ಧಿಯ ಕುರಿತು ಮಾತನಾಡಿದರು.

ಸಭೆಯಲ್ಲಿ ರಾಜ್ಯ ಸಂಘಟನೆಯ ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ ಸದಸ್ಯರು ಹಾಗೂ ವಿವಿಧ ಜಿಲ್ಲೆಗಳ ಪ್ರತಿನಿಧಿಗಳು ಪಾಲ್ಗೊಂಡು ಸಮಾಜದ ಹಿತಾಸಕ್ತಿ, ಸಂಘಟನೆ ವಿಸ್ತರಣೆ, ಶಿಕ್ಷಣಕ್ಕೆ ಹೆಚ್ಚಿನ ಉತ್ತೇಜನ, ಯುವಕರಿಗೆ ಅವಕಾಶಗಳ ಸೃಷ್ಟಿ ಸೇರಿದಂತೆ ಹಲವು ಮಹತ್ವದ ವಿಷಯಗಳ ಕುರಿತು ಚರ್ಚಿಸಿ ಪ್ರಮುಖ ನಿರ್ಣಯಗಳನ್ನು ಕೈಗೊಂಡರು.

ರಾಜ್ಯದಾದ್ಯಂತ ಸಮಾಜವನ್ನು ಇನ್ನಷ್ಟು ಸಂಘಟಿತವಾಗಿ ಬೆಳೆಸಲು ಹಾಗೂ ಅಭಿವೃದ್ಧಿಯತ್ತ ಮುನ್ನಡೆಸಲು ಎಲ್ಲರೂ ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು ಎಂದು ಮುಖಂಡರು ಕರೆ ನೀಡಿದರು.ಸಮಾಜದ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಕಂಪ್ಯೂಟರ ಹಾಗೂ ಬಡ ಮಹಿಳೆಯರಿಗೆ ಹೊಲಿಗೆ ಯಂತ್ರಗಳನ್ನು ಉಚಿತವಾಗಿ ವಿತರಣೆ ಮಾಡಿದರು

ಈ ಸಂದರ್ಭದಲ್ಲಿ ಅಧ್ಯಕ್ಷರು ರಾಮ ಡಿ. ಪವಾರ, ಮಾರುತಿರಾವ ಪವಾರ, ರಾಮಚಂದ್ರ ಕಾಂಬಳೆ, ಸಂಜಯ ಮಿಸ್ಕಿನ್, ಯಶವಂತರಾವ ಡಿ. ಮೇಂಗಜಿ, ವಿಷ್ಣು ಎಲ್ ಬಾರಡ, ಶಿವಕುಮಾರ ಎಸ್. ಚೌವ್ಹಾಣ, ನಾಗೇಶ ಚುಡಾಮಣಿ. ಕಾರ್ಯಕ್ರಮವನ್ನು ರವೀಂದ್ರಕುಮಾರ ಮೇಂಗಜಿ ನಿರೂಪಿಸಿದರು, ಅನಿಲ್ ಮಿಸ್ಕಿನ್. ಲಲಿತಾ ಚವಾಣ್. ಸುನಂದ ಪವರ್ ಸಮಾಜದ ಗಣ್ಯರು, ಸದಸ್ಯರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು

## ಉಪವಿಭಾಗದಲ್ಲಿಲ್ಲ ಆರ್‌ಟಿಓ ಕಚೇರಿ: ರಸ್ತೆ ಬದಿಯೇ ನೂತನ ವಾಹನಗಳ ತಪಾಸಣಾ ತಾಣ!ಅಧಿಕಾರಿಗಳು ಹಾಗೂ ಸಾರ್ವಜನಿಕರು ಹೈರಾಣು; ಶಾಶ್ವತ ಕಚೇರಿಗಾಗಿ ಸಾರ್ವಜನಿಕರ ಆಗ್ರಹ



**ಸೇಡಂ, ಜು,21:** ತಾಲೂಕಿನಲ್ಲಿ ವಿವಿಧ ಉಪವಿಭಾಗ ಕೇಂದ್ರಗಳದ್ದರು ಸ್ಥಳೀಯ ಉಪವಿಭಾಗದಲ್ಲಿ ಸುಸಜ್ಜಿತ ಪ್ರಾದೇಶಿಕ ಸಾರಿಗೆ ಕಚೇರಿ (ಆರ್ ಟಿ ಓ) ಇಲ್ಲದ ಕಾರಣ, ನೂತನ ವಾಹನಗಳ ನೋಂದಣಿ ತಪಾಸಣೆ ಹಾಗೂ ಚಾಲನಾ ಪರವಾನಗಿ ಪರೀಕ್ಷೆಯನ್ನು ರಸ್ತೆ ಬದಿಯಲ್ಲೇ ನಡೆಸಲಾಗುತ್ತಿದ್ದು, ಸಾರ್ವಜನಿಕರು ಮತ್ತು ಅಧಿಕಾರಿಗಳು ತೀವ್ರ ತೊಂದರೆ ಅನುಭವಿಸುವಂತಾಗಿದೆ.ಉಪವಿಭಾಗ ಕೇಂದ್ರವಾಗಿ ವರ್ಷಗಳು ಕಳೆದರೂ ಇಲ್ಲಿಗೆ ಸ್ವಂತ ಆರ್‌ಟಿಓ ಕಚೇರಿ ಅಥವಾ ಕನಿಷ್ಠ ಪಕ್ಷ ಸುಸಜ್ಜಿತ ತಪಾಸಣಾ ಮೈದಾನ ಭಾಗ್ಯ ಸಿಕ್ಕಿಲ್ಲ. ಪರಿಣಾಮವಾಗಿ, ನೆರೆಯ ತಾಲ್ಲೂಕಿನಿಂದ ವಾರಕ್ಕೆ ಒಂದೆರಡು ದಿನ ಬರುವ ಮೋಟಾರು ವಾಹನ ನಿರೀಕ್ಷಕರು ಅನಿವಾರ್ಯವಾಗಿ ಮುಖ್ಯ (ರಾಜ್ಯ ಹೆದ್ದಾರಿಯ) ಪಟ್ಟಣದ ಹೊರವಲಯ ಸರ್ಕಿಟ್ ಹೌಸ್ ಮುಂದುಗಡೆ ರಸ್ತೆಯ ಬದಿಯಲ್ಲೇ ನಿಂತು ಹೊಸ ವಾಹನಗಳ ದಾಖಲೆ ಹಾಗೂ ಎಂಜಿನ್ ಸಂಖ್ಯೆಗಳನ್ನು ಪರಿಶೀಲಿಸಬೇಕಾದ ದುಸ್ಥಿತಿ ನಿರ್ಮಾಣವಾಗಿದೆ.

ರಸ್ತೆ ಬದಿಯಲ್ಲಿ ಯಾವುದೇ ನೆರಳಿನ ವ್ಯವಸ್ಥೆ ಅಥವಾ ಆಸನಗಳಿಲ್ಲದ ಕಾರಣ, ಹೊಸ ವಾಹನ ತಂದ ಮಾಲೀಕರು ಗಂಟೆಗಟ್ಟಲೆ ಬಿಸಿಲು ಧೂಳಿನಲ್ಲೇ ಚಳಿಗಾಲ,ಮಳೆಗಾಲ ಧೂಳು ತಿನ್ನುತ್ತಾ ಕಾಯಬೇಕಾಗಿದೆ. ಇನ್ನು ಚಾಲನಾ ಪರೀಕ್ಷೆಗೆ ಬರುವ ಸಾರ್ವಜನಿಕರು, ಅದರಲ್ಲೂ ಮಹಿಳೆಯರು ಮತ್ತು ಹಿರಿಯ ನಾಗರಿಕರು ಶೌಚಾಲಯ ಹಾಗೂ ಕುಡಿಯುವ ನೀರಿನ ಸೌಲಭ್ಯವೂ ಇಲ್ಲದೆ ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ.ರಸ್ತೆಯಲ್ಲಿ ವಾಹನಗಳ ಸಂಚಾರ ದಟ್ಟಣೆ ಇರುವಾಗಲೇ ನಾವು ಜೀವ ಕೈಯಲ್ಲಿ ಹಿಡಿದು ಹೊಸ ವಾಹನಗಳ ತಪಾಸಣೆ ಮಾಡಬೇಕಿದೆ. ಕಚೇರಿ ಕೆಲಸ ನಿರ್ವಹಿಸಲು ಸೂಕ್ತ ಕಂಪ್ಯೂಟರ್ ನೆಟ್‌ವರ್ಕ್ ಅಥವಾ ದಾಖಲೆಗಳನ್ನಿಡಲು ಜಾಗವಿಲ್ಲದೆ ತೊಂದರೆಯಾಗುತ್ತಿದೆ ಎಂದು ಹೆಸರೇಳಲು ಇಚ್ಛಿಸದ ಅಧಿಕಾರಿಯೊಬ್ಬರು ಅಳಲು ತೋಡಿಕೊಂಡಿದ್ದಾರೆ.

ಶಾಶ್ವತ ಕಚೇರಿ ಸ್ಥಾಪನೆಗಾಗಿ ಉಪವಿಭಾಗಕ್ಕೆ ತಕ್ಷಣವೇ ಸ್ವಂತ ಆರ್‌ಟಿಓ ಕಚೇರಿ ಮಂಜೂರು ಮಾಡಬೇಕು.ಸುಸಜ್ಜಿತ ಮೈದಾನಕಾಗಿ ಚಾಲನಾ ಪರೀಕ್ಷೆ ಮತ್ತು ವಾಹನ ತಪಾಸಣೆಗೆ ನಗರದ ಹೊರವಲಯದಲ್ಲಿ ಪ್ರತ್ಯೇಕ ಮೈದಾನದ ವ್ಯವಸ್ಥೆ ಕಲ್ಪಿಸಬೇಕು.ಮೂಲಸೌಕರ್ಯಗಳಾದ ಸಾರ್ವಜನಿಕರು ಕಾಯಲು ನೆರಳಿನ ಆಸರೆ, ಕುಡಿಯುವ ನೀರು ಮತ್ತು ಶೌಚಾಲಯದ ವ್ಯವಸ್ಥೆ ಮಾಡಬೇಕು.ಇಲ್ಲಿನ ಜನಪ್ರತಿನಿಧಿಗಳು ಹಾಗೂ ಸಾರಿಗೆ ಇಲಾಖೆಯ ಉನ್ನತ ಅಧಿಕಾರಿಗಳು ಇನ್ನಾದರೂ ಎಚ್ಚೆತ್ತುಕೊಂಡು ಈ ಉಪವಿಭಾಗಕ್ಕೆ ಕಾಯಂ ಆರ್‌ಟಿಓ ಕಚೇರಿ ಮತ್ತು ಮೂಲಸೌಕರ್ಯ ಕಲ್ಪಿಸಬೇಕಿದೆ ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ. ಪತ್ರಿಕೆಯು ಕೂಡ ಆದಷ್ಟು ಮಟ್ಟಿಗೆ ಸೇಡಂ ತಾಲೂಕಿನಲ್ಲಿ ನೂ ಇರ್‌ಟಿಓ ಕಚೇರಿ ನಿರ್ಮಿಸಿ ವಾಹನ ಸವಾರರಿಗೆ ಅನುಕೂಲ ಮಾಡಿಕೊಡಬೇಕೆಂಬುದೇ ಆಶಯವಾಗಿದೆ.

## ಪ್ಲಾಸ್ಟಿಕ್ ವಿರುದ್ಧ ನ್ಯಾಯಾಂಗದ ಜಾಗೃತಿ ಸಮರ




**ಯಾದಗಿರಿ:ಜು.21:** ಪ್ಲಾಸ್ಟಿಕ್ ಬಳಕೆ ಪರಿಸರ, ಜೀವಜಗತ್ತು ಮತ್ತು ಮಾನವ ಆರೋಗ್ಯಕ್ಕೆ ದೊಡ್ಡ ಬೆದರಿಕೆಯಾಗಿ ಪರಿಣಮಿಸಿರುವ ಹಿನ್ನೆಲೆಯಲ್ಲಿ, ಜಿಲ್ಲೆಯನ್ನು ಪ್ಲಾಸ್ಟಿಕ್ ಮುಕ್ತಗೊಳಿಸುವ ಸಂಕಲ್ಪದೊಂದಿಗೆ ನ್ಯಾಯಾಂಗವೇ ಜನಜಾಗೃತಿಯ ಮುಂಚೂಣಿಗೆ ಬಂದಿದೆ. ನಗರದ ಗಂಜ್ ಆಂಜನೇಯ ದೇವಸ್ಥಾನ ಆವರಣದಿಂದ ಮಂಗಳವಾರ ಆಯೋಜಿಸಿದ್ದ ಪ್ಲಾಸ್ಟಿಕ್ ಮುಕ್ತ ಯಾದಗಿರಿ ಜಾಗೃತಿ ಜಾಥಾಕ್ಕೆ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶ ಮರುಳಸಿದ್ದಾರಾಧ್ಯ ಎಚ್.ಜೆ. ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಮರಿಯಪ್ಪ ಚಾಲನೆ ನೀಡಿದರು.

ಜಾಥಾದಲ್ಲಿ ಸ್ವತಃ ಪಾಲ್ಗೊಂಡು ಸಾರ್ವಜನಿಕರಿಗೆ ಜಾಗೃತಿ ಮೂಡಿಸಿದ ನ್ಯಾಯಾಧೀಶರು, ಏಕಬಳಕೆ ಪ್ಲಾಸ್ಟಿಕ್ ತ್ಯಜಿಸುವುದು ಪ್ರತಿಯೊಬ್ಬ ನಾಗರಿಕನ ಸಾಮಾಜಿಕ ಹೊಣೆಗಾರಿಕೆಯಾಗಿದೆ ಎಂದು ಕರೆ ನೀಡಿದರು. ಪರಿಸರವನ್ನು ಕಲುಷಿತಗೊಳಿಸುವ ಪ್ಲಾಸ್ಟಿಕ್ ಬಳಕೆ ಮುಂದುವರಿದರೆ ಮುಂದಿನ ಪೀಳಿಗೆಗೆ ಗಂಭೀರ ಸಂಕಷ್ಟ ಎದುರಾಗಲಿದೆ. ಆದ್ದರಿಂದ ಪರಿಸರ ಸಂರಕ್ಷಣೆಯನ್ನು ಜನಾಂದೋಲನವಾಗಿಸುವ ಅಗತ್ಯವಿದೆ ಎಂದು ಮರುಳಸಿದ್ದಾರಾಧ್ಯ ಹೇಳಿದರು.

ಹಿರಿಯ ಸಿವಿಲ್ ನ್ಯಾಯಾಧೀಶ ಮರಿಯಪ್ಪ ಮಾತನಾಡಿ, ಪ್ಲಾಸ್ಟಿಕ್‌ನಿಂದ ಮಣ್ಣು, ನೀರು ಹಾಗೂ ಜೀವರಾಶಿಗಳ ಮೇಲೆ ಉಂಟಾಗುತ್ತಿರುವ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಈ ಜಾಥಾ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯನ್ನು ಸಂಪೂರ್ಣ ಪ್ಲಾಸ್ಟಿಕ್ ಮುಕ್ತಗೊಳಿಸಲು ನಗರಸಭೆ, ಗ್ರಾಮ ಪಂಚಾಯಿತಿಗಳು ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ನಿರಂತರ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುವುದು ಎಂದು ತಿಳಿಸಿದರು.

ಗಂಜ್ ಆಂಜನೇಯ ದೇವಸ್ಥಾನದಿಂದ ಆರಂಭವಾದ ಜಾಥಾವು ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಸಾರ್ವಜನಿಕರು, ವ್ಯಾಪಾರಸ್ಥರು ಹಾಗೂ ಯುವಕರಿಗೆ ಏಕಬಳಕೆ ಪ್ಲಾಸ್ಟಿಕ್ ಬಳಕೆ ತ್ಯಜಿಸುವಂತೆ ಮನವಿ ಮಾಡಿತು. ಪರಿಸರ ಸಂರಕ್ಷಣೆಯ ಘೋಷಣೆಗಳು ಜಾಥಾದುದ್ದಕ್ಕೂ ಗಮನ ಸೆಳೆದವು.

ಕಾರ್ಯಕ್ರಮದಲ್ಲಿ ಹೋಮ್ ಗಾರ್ಡ್ ಕಮಾಂಡೆಂಟ್ ಈರಣ್ಣ ಬಡಿಗೇರ, ಸಹಾಯಕ ಪರಿಸರ ಅಧಿಕಾರಿ ಶಕುಂತಲಾ, ವಿಜಯ ವಿಠಲ್ ಸೇವಾ ಸಂಸ್ಥೆ ಅಧ್ಯಕ್ಷ ವಿಠಲ್ ಕುಲಕರ್ಣಿ, ಶಶಿ ಚಾರಿಟೇಬಲ್ ಟ್ರಸ್ಟ್ ಅಧ್ಯಕ್ಷ ಮಲ್ಲಿಕಾರ್ಜುನ ಶಿರಗೋಳ, ನಗರಸಭೆಯ ಕಿರಿಯ ಆರೋಗ್ಯ ನಿರೀಕ್ಷಕಿ ಶರಣಮ್ಮ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಸ್ವಯಂಸೇವಾ ಸಂಘಟನೆಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

# ಭಾರತೀಯ ಸಂಗೀತ ಪರಂಪರೆಯನ್ನು ಮರೆಯಬಾರದು :ಮಹೇಶ ಹೂಗಾರ




**ಕಲಬುರಗಿ :**ಇತ್ತೀಚಿನ ದಿನಗಳಲ್ಲಿ ಯುವಜನತೆ ಪಾಶ್ಚಾತ್ಯ ಸಂಗೀತದ ಕಡೆ ಹೆಚ್ಚು ಆಕರ್ಷಿತರಾಗುತ್ತಿದ್ದಾರೆ. ಹೊಸತನವನ್ನು ಸ್ವೀಕರಿಸುವುದು ಒಳ್ಳೆಯದೇ, ಆದರೆ ನಮ್ಮ ಭಾರತೀಯ ಶಾಸ್ತ್ರೀಯ ಸಂಗೀತ, ಜಾನಪದ ಸಂಗೀತ ಮತ್ತು ಭಾವಗೀತೆಗಳಂತಹ ಶ್ರೀಮಂತ ಸಂಗೀತ ಪರಂಪರೆಯನ್ನು ಮರೆಯಬಾರದು. ನಮ್ಮ ಬೇರುಗಳನ್ನು ಉಳಿಸಿಕೊಂಡು, ಇತರ ಸಂಗೀತ ಶೈಲಿಗಳನ್ನು ಗೌರವಿಸುವ ಮನೋಭಾವವನ್ನು ಬೆಳೆಸಬೇಕು. ಆಧುನಿಕತೆ ಮತ್ತು ಸಂಪ್ರದಾಯ ಎರಡರ ನಡುವೆ ಸಮತೋಲನ ಕಾಪಾಡಿದಾಗ ಮಾತ್ರ ನಮ್ಮ ಸಂಗೀತ ಸಂಸ್ಕೃತಿ ಮತ್ತಷ್ಟು ಶ್ರೀಮಂತವಾಗುತ್ತದೆ."ಎಂದು ಕರ್ನಾಟಕ ರಾಜ್ಯ ಪ್ರೌಢ ಶಾಲಾ ಸಹ ಶಿಕ್ಷಕರ ಸಂಘ ಕಲ್ಬುರ್ಗಿಯ ಅಧ್ಯಕ್ಷ ರಾದ ಮಹೇಶ್ ಹೂಗಾರ ಹೇಳಿದರು.ಅವರು ಗಿರಿಜಾದೇವಿ ಸಂಗೀತ ನೃತ್ಯ ಕಲಾ ಮಂದಿರ (ರಿ), ಕಲಬುರಗಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಗರದ ಕಲಾಮಂಡಳ್ ದಲ್ಲಿ ಭಾನುವಾರ ಸಂಜೆ ನಡೆದ "ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕಲೆ ಮತ್ತು ಸಂಸ್ಕೃತಿಯ ಬೆಳವಣಿಗೆಗೆ ಇಂತಹ ಕಾರ್ಯಕ್ರಮಗಳು ಅತ್ಯಂತ ಅವಶ್ಯಕವಾಗಿದ್ದು, ಯುವ ಕಲಾವಿದರಿಗೆ ಉತ್ತಮ ವೇದಿಕೆಯನ್ನು ಒದಗಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಜೇಶ್ ನೀಲಹಳ್ಳಿ, ವಹಿಸಿದ್ದರು,ಮುಖ್ಯ ಅತಿಥಿಗಳಾಗಿ ಚಂದ್ರಕಾಂತ ಎಂ., ಆನಂದತೀರ್ಥ ಜೋಶಿ, ಶ್ರೀಮತಿ ಗಿರಿಜಾ ಡಿ. ಪೂಜಾರಿ, ಶ್ರೀಮತಿ ಸುಭದ್ರಾ ಜೋಶಿ ಹಾಗೂ ಶ್ರೀ ದೇವೇಂದ್ರ ಮೇಲಕೇರಿ ಮುಂತಾದವರು ಉಪಸ್ಥಿತರಿದ್ದು, ಕಲಾ-ಸಂಸ್ಕೃತಿಯ ಉಳಿವು ಮತ್ತು ಬೆಳೆಸುವ ನಿಟ್ಟಿನಲ್ಲಿ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು.

ಬಳಿಕ ನಡೆದ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಕರ್ನಾಟಕದ ವಿವಿಧ ಭಾಗಗಳ ಕಲಾವಿದರಾದ ಗುರುಶಾಂತಯ್ಯ ಸ್ಥಾವರ ಮಠ್, ಬಾಬುರಾವ ಕೋಬಾಳ್. ಅಣ್ಣಾರಾವ ಮತ್ತಿಮೂಡ್, ಸೈದಪ್ಪ ಸಪ್ಪನಗೋಳ, ವಿಜಯಲಕ್ಷ್ಮಿ ಕೆಂಗನಾಳ್, ನಾಗಲಿಂಗಯ್ಯ ಸ್ಥಾವರಮಠ, ವರ್ಣಾ ಧರಾಮಗಿರಿ, ಸ್ವಾತಿ ಕೋಬಾಳ್, ಪವಿತ್ರಾ ರಾಜನಾಳ್, ಕು. ವಿಂದ್ಯ ಶ್ರೀ ಕು. ಪಲ್ಲವಿ ಇವರಿಂದ ಹಿಂದೂಸ್ತಾನಿ ಸಂಗೀತ.ಸುಗಮ ಸಂಗೀತ, ವಚನಗಾಯನ, ಜಾನಪದ ಗೀತೆ, ತತ್ವಪದಗಳು, ದಾಸವಾಣಿ ಭಾವಗೀತೆ, ಹಾಗೂ ವಾದ್ಯ ಸಂಗೀತವನ್ನು ಪ್ರಸ್ತುತಪಡಿಸಿ ಪ್ರೇಕ್ಷಕರ ಮನಸೂರೆಗೊಂಡರು. ಸಭಾಂಗಣ ತುಂಬಿದ್ದ ಕಲಾಭಿಮಾನಿಗಳು ಕಲಾವಿದರ ಪ್ರದರ್ಶನಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

# ಹಂಪಿ ಕನ್ನಡ ವಿವಿಯಲ್ಲಿ ವಚನ ಅಧ್ಯಯನಪೀಠ ಆರಂಭಕ್ಕೆ ಆಗ್ರಹ



**ಬಳ್ಳಾರಿ, ಜು.21:** ಹಂಪಿ ಕನ್ನಡ ವಿಶ್ವವಿದ್ಯಾಲಯದಲ್ಲಿ ವಚನ ಅಧ್ಯಯನಪೀಠ ಪ್ರಾರಂಭಿಸಲಬೇಕೆಂದು ನಿನ್ನೆ ಹಂಪಿ ಲಿಂಗಾಯತ ಧರ್ಮ ಪುನರುತ್ಥಾನ ಕೇಂದ್ರ ಹಂಪಿಯಲ್ಲಿ ಹಮ್ಮಿಕೊಂಡಿದ್ದ ವಿಶ್ವಗುರು ಬಸವಣ್ಣನವರ ಸಂಸ್ಮರಣ ಉತ್ಸವದಲ್ಲಿ ಆಗ್ರಹಿಸಲಾಗಿದೆ.

ಹಂಪಿಯ ಎದುರು ಬಸವ ಮಂಟಪದಲ್ಲಿ ಗುರುಬಸವೇಶ್ವರ ಪೂಜಾ ಅನುಷ್ಠಾನ, ಇಷ್ಟಲಿಂಗ ಯೋಗ ಅನುಸಂಧಾನ ಪೂಜೆ, ಪ್ರಾರ್ಥನೆ, ಧ್ಯಾನ ಮತ್ತು ವಚನ ಪಠಣೆಯೊಂದಿಗೆ ಕಾರ್ಯಕ್ರಮ ಪ್ರಾರಂಭವಾಯಿತು. ಬಸವ ಧ್ವಜಾರೋಹಣ ನಂತರ ರಥ ಬೀದಿಯಲ್ಲಿ ಪಥ ಸಂಚಲನ ನಡೆಯಿತು.

ಬಳಿಕ ನಾಗೇನಹಳ್ಳಿ ಹತ್ತಿರದ ಧರ್ಮದ ಗುಡ್ಡದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಿತು. ರಾಷ್ಟ್ರೀಯ ಬಸವದಳದ ಕೇಂದ್ರ ಸಮಿತಿಯ ಎನ್. ಚಂದ್ರ ಮೌಳಿ ಮಾತನಾಡಿ, ಬಸವಕಲ್ಯಾಣದಲ್ಲಿ ನಿರ್ಮಾಣವಾಗುತ್ತಿರುವ ಅನುಭವ ಮಂಟಪವನ್ನು ರಕ್ಷಿಸುವ ನಿಟ್ಟಿನಲ್ಲಿ ಸಮಸ್ತ ಬಸವ ಭಕ್ತರು ಸೇವಾ ಕಾರ್ಯದಲ್ಲಿ ತೊಡಗಬೇಕೆಂದರು.

ಬಸವ ದೇವರು, ಬಸವ ಬೆಳವಿ ಅವರು ವಚನ ಪ್ರವಚನ ಮಾಡಿ, ಲಿಂಗಾಯತ ಧರ್ಮದ ಪುನರುತ್ಥಾನ ಮತ್ತು ವಿಜಯನಗರ ಸಂಗಮ ವಂಶದ ದೊರೆಗಳ ವಚನ ಸಾಹಿತ್ಯದ ಅನುಷ್ಠಾನ ಹಾಗೂ ಪ್ರಚಾರದ ಬಗ್ಗೆ ವಿವರಿಸಿದರು.

ಟಿ. ಹೆಚ್. ಬಸವರಾಜ್ ಪ್ರಾಸ್ತಾವಿಕವಾಗಿ ಮಾತನಾಡಿ ಧರ್ಮದ ಗುಡ್ಡದ ಮಹತ್ವವನ್ನು ತಿಳಿಸಿದರು. ಪೂಜ್ಯ ವೆಂಕಟಾಪುರ ಬಸವರಾಜಪ್ಪ ಶರಣರು ಬಸವ ತತ್ವ ಪರ ಸಂಘಟನೆಗಳು ನಿರಂತರವಾಗಿ ಇಷ್ಟಲಿಂಗ ಯೋಗ ಅನುಸಂಧಾನ ಮತ್ತು ವಚನ ಗೋಷ್ಠಿಗಳ ಮೂಲಕ ಸಂಘಟಿತರಾಗಬೇಕೆಂದರು.

ಈ ವೇಳೆ ಕೈಗೊಂಡ ನಿರ್ಣಯಗಳು: ಬಸವಕಲ್ಯಾಣದ ನೂತನ ಅನುಭವ ಮಂಟಪದ ಕರಸೇವೆಯಲ್ಲಿ ತನು, ಮನ, ಧನ, ಪ್ರಾಣ, ಅಭಿಮಾನ, ಸಮಯದ ಮೂಲಕ ದಾಸೋಹ ಸೇವೆಯಲ್ಲಿ ಭಾಗವಹಿಸುವುದು. 2027ರಲ್ಲಿ ಸಂಸ್ಮರಣ ಉತ್ಸವ 10ನೇ ವರ್ಷಕ್ಕೆ ಕಾಲಿಡುವುದರಿಂದ ಅದನ್ನು ವಿಶೇಷವಾಗಿ ಆಚರಿಸುವುದು. ಲಿಂಗಾಯತ ಧರ್ಮದ ಪುನರುತ್ಥಾನ, ಸಂಗಮ ವಂಶದ ಕೊಡುಗೆ, ಪ್ರೌಢದೇವರಾಯ, ನೂರೊಂದು ವಿರಕ್ತರು, ಯಡಿಯೂರು ಸಿದ್ದಲಿಂಗೇಶ್ವರ ಮತ್ತು ವಚನ ಪ್ರಕಟಣೆಗಳ ಬಗ್ಗೆ ಸಮಗ್ರ ಅಧ್ಯಯನ ಗ್ರಂಥ ಪ್ರಕಟಿಸುವುದು.

# ಮಕ್ಕಳ ಪ್ರತಿಭೆಗೆ ತಕ್ಕ ಪ್ರತಿಫಲ ಖಂಡಿತ : ಅಡವೇಶ ಇಟಗಿ



**ಕಲಬುರಗಿ: ಜು.21:** ಮಕ್ಕಳು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಬೇಕು, ಪ್ರತಿಭೆಗೆ ತಕ್ಕ ಪ್ರತಿಫಲ ಖಂಡಿತ ಸಿಗುತ್ತದೆ, ಎಂದು ಧಾರವಾಡ ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷ ಅಡಿವೇಶ ಗಿ. ಇಟಗಿ ಹೇಳಿದರು.

ನಗರದ ಅಬ್ದುಲ್ ನಜೀರ್ ಸಾಬ್ ಸಂಸ್ಥೆಯಲ್ಲಿ ಶುಕ್ರವಾರ ಕರ್ನಾಟಕ ಬಾಲ ವಿಕಾಸ ಅಕಾಡೆಮಿ, ಜಿಲ್ಲಾ ಪಂಚಾಯತ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ 12-18 ವರ್ಷದ ಮಕ್ಕಳ 4 ದಿನಗಳ ಬಾಲ ಬಾಂಧವ್ಯ ವಿಭಾಗೀಯ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು ಪ್ರತಿ ಬಾರಿ ಧಾರವಾಡದಲ್ಲಿ ನಡೆಯುತ್ತಿದ್ದ ಈ ಕಾರ್ಯಕ್ರಮ ಕಲಬುರಗಿಯಲ್ಲಿ ನಡೆದಿರುವುದು ಸಂತಸ ತಂದಿದೆ, ಮಕ್ಕಳ ಸಹಾಯವಾಣಿ, ಅಕ್ಕಪಡೆ, ಬಾಲ್ಯವಿವಾಹ ತಡೆ ಹಾಗೂ ಶಿಕ್ಷಣದ ಮಹತ್ವದ ಕುರಿತು ಜಾಗೃತಿ ಮೂಡಿಸಿದರು.

ಕರ್ನಾಟಕ ಬಾಲವಿಕಾಸ ಅಕಾಡೆಮಿ ಧಾರವಾಡ ಯೋಜನಾಧಿಕಾರಿ ವಿರೂಪಾಕ್ಷಗೌಡ ಪಿ. ಪಾಟೀಲ ಅವರು ಮಾತನಾಡಿ, ಕಥೆಗಳ ಮೂಲಕ ಏಕಾಗ್ರತೆ, ಸಂಸ್ಕಾರಗಳನ್ನು ಬೋಧಿಸಿದರು. ಹಾಗೂ ಪಂಚೇಂದ್ರಿಯಗಳನ್ನು ಒಳ್ಳೆಯದಕ್ಕಾಗಿ ಹೇಗೆ ಬಳಸಿಕೊಳ್ಳಬೇಕು ಎಂದು ತಿಳಿಸಿದರು.

ಜಿಲ್ಲಾ ಮಟ್ಟದ ಬಾಲ ವಿಕಾಸ ಅಕಾಡಮಿ ಅನುಷ್ಠಾನ ಸಮಿತಿ ನಾಮನಿರ್ದೇಶಿತ ಸದಸ್ಯ ಎ. ಕೆ. ರಾಮೇಶ್ವರ್ ಅವರು ಮಾತನಾಡಿ ಮಕ್ಕಳಿಗಿಂತ ಪ್ರಪಂಚದಲ್ಲಿ ದೊಡ್ಡದು ಯಾವುದು ಇಲ್ಲ, ಭಾರತದ ಭವಿಷ್ಯ ಮಕ್ಕಳ ಕಣ್ಣಿನ ಕಾಂತಿಯಲ್ಲಿದೆ ಎಂದು ಹೇಳಿದರು.

ಜಿಲ್ಲಾ ಮಟ್ಟದ ಬಾಲ ವಿಕಾಸ ಅಕಾಡಮಿ ಅನುಷ್ಠನ ಸಮಿತಿ ನಾಮನಿರ್ದೇಶಿತ ಸದಸ್ಯ ರಣಧೀರ್ ಹೊಸಮನಿ ಅವರು ಮಾತನಾಡಿ, ಮಕ್ಕಳ ಮಹತ್ವ ಮತ್ತು ಬಾಂಧವ್ಯದ ಕುರಿತು ಮಾತನಾಡಿದರು.ಕಾರ್ಯಾಗಾರದಲ್ಲಿ ಕಲಬುರಗಿ, ಬೀದರ್, ಬಳ್ಳಾರಿ, ಕೊಪ್ಪಳ, ರಾಯಚೂರು, ವಿಜಯನಗರ ಹಾಗೂ ಯಾದಗಿರಿ ಜಿಲ್ಲೆಗಳ 100 ಮಕ್ಕಳು ಭಾಗವಹಿಸಿದ್ದರು. ಸಾಂಸ್ಕೃತಿಕ ಸ್ಪರ್ಧೆಗಳಲ್ಲಿ ಗೆದ್ದ ವಿಜೇತರಿಗೆ ಬಹುಮಾನ ಹಾಗೂ ಭಾಗವಹಿಸಿದ ಎಲ್ಲರಿಗೂ ಪ್ರಮಾಣಪತ್ರ ವಿತರಿಸಲಾಯಿತು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಶಿವಶರಣಪ್ಪ ಸ್ವಾಗತಿಸಿದರು. ಸಮಾರೋಪ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಮಂಜುಳಾ ವಿ ಪಾಟೀಲ್ ವಹಿಸಿದ್ದರು. ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ವಿಶ್ವರಾಧ್ಯ ಇಜೇರಿ ಉಪಸ್ಥಿತರಿದ್ದರು.

# ಅರಕೇರಿಯಲ್ಲಿ ವಿಬಿಜಿರಾಮಜಿ ಯೋಜನೆ ಜನಜಾಗೃತಿ ದಿನಗೂಲಿ 382ಕ್ಕೆ ಏರಿಕೆ, 125 ದಿನ ಉದ್ಯೋಗ ಖಾತ್ರಿ ಗ್ರಾಮೀಣ ಕೂಲಿಕಾರರಿಗೆ ಹೊಸ ಭರವಸೆ



**ವಿಜಯಪುರ, ಜು.21:** ಜಿಲ್ಲೆಯ ತಿಕೋಟಾ ತಾಲೂಕಿನ ಅರಕೇರಿ ಗ್ರಾಮ ಪಂಚಾಯತಿಯಲ್ಲಿ ಮಾಹಿತಿ, ಶಿಕ್ಷಣ ಮತ್ತು ಸಂವಹನ (ಐಇಸಿ) ಕಾರ್ಯಕ್ರಮದಡಿ ಕೇಂದ್ರ ಸರ್ಕಾರದ "ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಅಂಡ್ ಆಜೀವಿಕಾ ಮಿಷನ್ ಗ್ರಾಮೀಣ (VBGRAMG)" ಯೋಜನೆ ಕುರಿತು ಬೃಹತ್ ಜನಜಾಗೃತಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಪಂಚಾಯತ್ ಅಭಿವೃದ್ಧಿ ಅಧಿಕಾರಿ ವಿ.ಎಸ್. ನಾಯಿಕ ಮಾತನಾಡಿ, ಗ್ರಾಮೀಣ ಕೂಲಿಕಾರರ ಕಲ್ಯಾಣಕ್ಕಾಗಿ ಹೊಸ ಯೋಜನೆಯಡಿ ಹಲವು ಮಹತ್ವದ ಬದಲಾವಣೆಗಳನ್ನು ಜಾರಿಗೆ ತರಲಾಗಿದೆ ಎಂದು ತಿಳಿಸಿದರು.

ದಿನಗೂಲಿಯನ್ನು 370ರಿಂದ ?382ಕ್ಕೆ ಹೆಚ್ಚಿಸಲಾಗಿದ್ದು, ಮಹಿಳೆ ಮತ್ತು ಪುರುಷರಿಗೆ ಸಮಾನ ಕೂಲಿ ನೀಡಲಾಗುತ್ತದೆ. ಉದ್ಯೋಗ ಖಾತರಿಯ ಅವಧಿಯನ್ನು 100 ದಿನಗಳಿಂದ 125 ದಿನಗಳಿಗೆ ವಿಸ್ತರಿಸಲಾಗಿದೆ. ಕೂಲಿ ಮೊತ್ತವನ್ನು 15 ದಿನಗಳೊಳಗೆ ನೇರವಾಗಿ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುತ್ತಿದ್ದು, ವಿಳಂಬವಾದರೆ ಪರಿಹಾರ ನೀಡುವ ವ್ಯವಸ್ಥೆಯೂ ಇದೆ ಎಂದು ಹೇಳಿದರು.

ಯೋಜನೆಯಡಿ ಉದ್ಯೋಗ ಸೃಷ್ಟಿಯ ಜೊತೆಗೆ ಕೆರೆ, ಕಾಲುವೆ, ರಸ್ತೆ, ಶಾಲಾ ಆವರಣ ಗೋಡೆ ಸೇರಿದಂತೆ ಗ್ರಾಮೀಣ ಶಾಶ್ವತ ಆಸ್ತಿಗಳ ನಿರ್ಮಾಣಕ್ಕೆ ಆದ್ಯತೆ ನೀಡಲಾಗುತ್ತಿದೆ. ಯಾವುದೇ ಗ್ರಾಮೀಣ ಕೂಲಿಕಾರರು ಉದ್ಯೋಗದಿಂದ ವಂಚಿತರಾಗದಂತೆ ಸರ್ಕಾರ ಕ್ರಮ ಕೈಗೊಂಡಿದ್ದು, ತಾಲೂಕಿನ ಎಲ್ಲ ಗ್ರಾಮ ಪಂಚಾಯತಿಗಳ ಸಿಬ್ಬಂದಿಗೆ ಅಗತ್ಯ ತರಬೇತಿಯನ್ನೂ ನೀಡಲಾಗಿದೆ ಎಂದು ತಿಳಿಸಿದರು.

ಮನರೇಗಾ ಕಾಮಗಾರಿ ಮುಂದುವರಿಕೆ: ಜೂನ್ 30ರವರೆಗೆ ಮನರೇಗಾ ಯೋಜನೆಯಡಿ ಆರಂಭಗೊಂಡಿರುವ ಕಾಮಗಾರಿಗಳನ್ನು ಹೊಸ ಯೋಜನೆಯ ನಿಯಮಗಳ ಅನ್ವಯ ಯಾವುದೇ ಅಡಚಣೆ ಇಲ್ಲದೆ ಮುಂದುವರಿಸಲು ಅವಕಾಶವಿದ್ದು, ಕೂಲಿಕಾರರ ಉದ್ಯೋಗಕ್ಕೆ ಯಾವುದೇ ತೊಂದರೆ ಉಂಟಾಗುವುದಿಲ್ಲ ಎಂದು ಅವರು ಸ್ಪಷ್ಟಪಡಿಸಿದರು.

ಇ-ಕೆವೈಸಿ ಕಡ್ಡಾಯ: ನೋಂದಾಯಿತ ಎಲ್ಲ ಕೂಲಿಕಾರರು ಕಡ್ಡಾಯವಾಗಿ ಇ-ಕೆವೈಸಿ ಪೂರ್ಣಗೊಳಿಸಬೇಕು. ಹೊಸದಾಗಿ ಉದ್ಯೋಗ ಚೀಟಿ ಪಡೆಯಲು ಅರ್ಹರಾಗಿರುವವರು ಗ್ರಾಮ ಪಂಚಾಯತಿಯನ್ನು ಸಂಪರ್ಕಿಸಿ ನೋಂದಣಿ ಮಾಡಿಸಿಕೊಳ್ಳಬೇಕು. ಗ್ರಾಮಸ್ಥರು ಉದ್ಯೋಗಕ್ಕಾಗಿ ವಲಸೆ ಹೋಗದೆ ತಮ್ಮ ಗ್ರಾಮದಲ್ಲಿಯೇ ಯೋಜನೆಯ ಸೌಲಭ್ಯಗಳನ್ನು ಪಡೆದುಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ತಾಲೂಕು ಐಇಸಿ ಸಂಯೋಜಕ ಕಲ್ಲಪ್ಪ ನಂದರಗಿ ಮಾತನಾಡಿ, ಹೊಸ ಜಾಬ್ ಕಾರ್ಡ್ ಬರುವವರೆಗೆ ಈಗಾಗಲೇ ಮನರೇಗಾ ಯೋಜನೆಯಡಿ ನೀಡಿರುವ ಹಳೆಯ ಜಾಬ್ ಕಾರ್ಡಗಳೇ ಮಾನ್ಯವಾಗಿರುತ್ತವೆ. ಇ-ಕೆವೈಸಿ ಪೂರ್ಣಗೊಳಿಸದವರಿಗೆ ಯೋಜನೆಯ ಪ್ರಯೋಜನ ದೊರೆಯುವುದಿಲ್ಲವಾದ್ದರಿಂದ ಎಲ್ಲರೂ ಶೀಘ್ರವಾಗಿ ಇ-ಕೆವೈಸಿ ಮಾಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತಾಲೂಕು ಐಇಸಿ ಸಂಯೋಜಕ ಕಲ್ಲಪ್ಪ ನಂದರಗಿ, ಬಿ.ಎಫ್.ಟಿ. ಸಂತೋಷ ಗೊಜ್ಜಿ, ಗ್ರಾಮ ಪಂಚಾಯತಿ ಸದಸ್ಯರು, ಸ್ವಸಹಾಯ ಸಂಘಗಳ ಮಹಿಳೆಯರು ಹಾಗೂ ನೂರಾರು ಕೂಲಿಕಾರರು ಭಾಗವಹಿಸಿದ್ದರು.

# ಗ್ರಾಹಕರು ಬ್ಯಾಂಕ್‌ನ ಸೌಲಭ್ಯಗಳನ್ನು ಪಡೆದುಕೊಳ್ಳಿ



**ಸೈದಾಪುರ:**ಗ್ರಾಹಕರ ಅನುಕೂಲಕ್ಕಾಗಿ ನಾನಾ ಯೋಜನೆಗಳ ಸೌಲಭ್ಯಗಳನ್ನು ನೀಡುತ್ತಿದ್ದು ಅವುಗಳ ಸದುಪಯೋಗ ಪಡೆದುಕೊಂಡು ಆರ್ಥಿಕವಾಗಿ ಸಬಲರಾಗಬೇಕು ಎಂದು ಬ್ಯಾಂಕ್ ವ್ಯವಸ್ಥಾಪಕ ಭಾಸ್ಕರ್ ಅವರು ಸಲಹೆ ನೀಡಿದರು.

ಸಮೀಪದ ಬಳಿಚಕ್ರ ಗ್ರಾಮದ ಬ್ಯಾಂಕ್‌ಆಫ್ ಬರೋಡಾ ಶಾಖೆಯಲ್ಲಿ ಸೋಮವಾರ ಹಮ್ಮಿಕೊಂಡಿದ್ದ ಬ್ಯಾಂಕ್ ನ 119ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದರು. ಗ್ರಾಹಕ ಸ್ನೇಹಿಯಾದ ನಮ್ಮ ಬ್ಯಾಂಕ್‌ಆಫ್ ಬರೋಡಾವನ್ನು 1908 ಜುಲೈ ತಿಂಗಳಲ್ಲಿ ಶಾಯಜಿರಾವ್ ಗಾಯ್ಕವಾಅವರು ವಡೋದರದಲ್ಲಿ ಸ್ಥಾಪನೆ ಮಾಡುತ್ತಾರೆ. ಆರಂಭಿಕ ದಿನದಿಂದ ಇಂದಿನವರೆಗೆ ಗ್ರಾಹಕರಿಗೆ ಪೂರಕವಾಗಿ ಬ್ಯಾಂಕ್ ನಿಯಮಗಳನ್ನು ರೂಪಿಸಿದ್ದು ಕಾರ್ಯರೂಪಕ್ಕೆತರಲಾಗುತ್ತಿದೆ ಎಂದು ಹೇಳಿದರು.

ನಮ್ಮ ಬಳಿಚಕ್ರ ಬ್ಯಾಂಕ್ ಗ್ರಾಮೀಣ ಪ್ರದೇಶದಲ್ಲಿದ್ದು ಇಲ್ಲಿಗೆ ಬರುವ ಬಹುತೇಕ ಗ್ರಾಹಕರು ಕೃಷಿಕರೇ ಆಗಿದ್ದಾರೆ. ಅವರಲ್ಲಿ ಎಲ್ಲರೂ ಬೆಳೆ ಸಾಲ ಪಡೆಯುತ್ತಿದ್ದಾರೆ. ಇದಲ್ಲದೆ ವಾಹನ, ಮನೆ ಇತ್ಯಾದಿಗಳಿಗೆ ಸಾಲ ಸೌಲಭ್ಯ ನೀಡಲಾಗುತ್ತದೆ. ಹಣ ಪಡೆದು ನಿಯಮಿತವಾಗಿ ಮರುಪಾವತಿ ಮಾಡುವ ಗ್ರಾಹಕರಿಗೆ ಸಾಲ ಯೋಜನೆ ತುಂಬಾ ಸಹಕಾರಿಯಾಗಿದೆ. ಇದಲ್ಲದೆ ಬ್ಯಾಂಕ್ ನಲ್ಲಿ ಹಣ ಠೇವಣಿ ಇಡುವವರಿಗೆ ಆಕರ್ಷಕ ಬಡ್ಡಿ ನೀಡಲಾಗುತ್ತದೆ ಎಂದು ತಿಳಿಸಿದರು.

ಸಂಸ್ಥಾಪನಾ ದಿನದ ನಿಮಿತ್ತ ಬರೋಡಾ ಬ್ಯಾಂಕ್ ಬಳಿಚಕ್ರ ಶಾಖೆಗೆ ಬಲೂನ್ ಮತ್ತಿತರ ಅಲಂಕಾರಿಕ ವಸ್ತುಗಳಿಂದ ಸಿಂಗರಿಸಲಾಗಿತ್ತು. ಇದಲ್ಲದೆ ಸಂಸ್ಥಾಪಕರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ವಿಶೇಷ ಪೂಜೆ ಸಲ್ಲಿಸಿದ ಬ್ಯಾಂಕ್ ಸಿಬ್ಬಂದಿ ಕೇಕ್ ಕತ್ತರಿಸಿ, ಸಿಹಿ ತಿಂದು ಸಂಭ್ರಮಿಸಿದರು.

ಈ ವೇಳೆ ಬ್ಯಾಂಕ್ ನ ನಿವೃತ್ತ ಅಧಿಕಾರಿ ಮಹದೇವಪ್ಪ ಕಣೇಕಲ್, ಬ್ಯಾಂಕ್‌ನ ಸಹಾಯಕ ವ್ಯವಸ್ಥಾಪಕ ನರೇಂದ್ರ, ಕ್ಯಾಶಿಯರ್ ಮಯೂರ್, ಉಮೇಶ, ರಸೂಲ್ ಬಿ, ಡಿಎಸ್ ಎ ಸಾಹೇಬಹುಸೇನ್ ನೀಲಹಳ್ಳಿ, ಮಶೇಪ್ಪ, ಭೀಮಪ್ಪ ಕಾಳೆಬೆಳಗುಂದಿ, ಭೀಮೇಶ್, ಗುರುರಾಜ ಬಳಿಚಕ್ರ, ಖಂಡಪ್ಪ, ರಾಜಶೇಖರಗೌಡ ಕಾಳೆಬೆಳಗುಂದಿ, ಅನಿಲ್ ವಂಕಸಂಬರ ಸೇರಿದಂತೆ ಗ್ರಾಹಕರು ಉಪಸ್ಥಿತರಿದ್ದರು.

**Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.**
**Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE**